ಸಂಪುಟ : 4 ಸಂಚಿಕೆ : 04 ಪುಟ : 4 ಬೆಲೆ : ರೂ. 4 ಶನಿವಾರ, ಫೆಬ್ರುವರಿ, 11, 2023 E-mail: newsbelagavi@gmail.com Mobile No-9900332089

ಬೆಳಗಾವಿ ಮತ್ತು ಬೆಂಗಳೂರಿನಿಂದ ಏಕ ಕಾಲದಲ್ಲಿ ಪ್ರಕಟಿತ

ಬೆಳಗಾವಿ ವರದಿ

BELAGAVI VARADI KANNADA DAILY

ಕರ್ನಾಟಕ ಕನ್ನಡ ದಿನಪತ್ರಿಕೆ

ಸಂಪಾದಕರು : ಸತೀಶ್.ಬಿ.ಜಿ

Volume : 4 Issue : 04 Pages : 4 Rate : 4 Rs Saturday, February 11, 2023 RNI : KARKAN/2020/79084 Post Regn.No:G-2/PMG/KA/NK/BM/139/2021-23 belagavivaradi@gmail.com

ಬಜೆಟ್ ಅಧಿವೇಶನ: ರಾಜ್ಯ ಬಿಜೆಪಿ ಸರ್ಕಾರದ ಸಾಧನೆ ವಿವರಿಸಿದ ರಾಜ್ಯಪಾಲರು

ಬೆಂಗಳೂರು: ಇಂದಿನಿಂದ ರಾಜ್ಯ ಬಜೆಟ್ ಅಧಿವೇಶನ ಆರಂಭವಾಗಿದ್ದು, ಉಭಯ ಸದನಗಳನ್ನು ಉದ್ದೇಶಿಸಿ ಮಾತನಾಡಿದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಬಿಜೆಪಿ ಸರ್ಕಾರದ ಸಾಧನೆಯ ಬಗ್ಗೆ ವಿವರಿಸಿದರು.

ಜಂಟಿ ಅಧಿವೇಶನ ಉದ್ದೇಶಿಸಿ ಮಾತನಾಡಿದ ರಾಜ್ಯಪಾಲರು, ಈ ಜನವರಿಗೆ ಶೇ.91ರಷ್ಟು ರಾಜಸ್ವ ಸಂಗ್ರಹ ಗುರಿ ಸಾಧಿಸಲಾಗಿದೆ.

ಪ್ರಸಕ್ತ ಬಜೆಟ್ ನ ಶೇ.75ರಷ್ಟು ವೆಚ್ಚ ಮಾಡಲಾಗಿದೆ. ರಾಜ್ಯದಲ್ಲಿ ಅತ್ಯಾಚಾರ, ಪೋಕ್ಸೋ ಪ್ರಕರಣಗಳ ವಿಚಾರಣೆಗಾಗಿ ವಿಶೇಷ ಕೋರ್ಟ್ ಸ್ಥಾಪಿಸಲಾಗಿದೆ ಎಂದರು.

ಜಾನುವಾರುಗಳ ಚರ್ಮಗಂಟು ರೋಗ ತಡೆಗಟ್ಟಲು 1 ಕೋಟಿಗೂ ಅಧಿಕ ಜಾನುವಾರುಗಳಿಗೆ ಲಸಿಕೆ ಹಾಕಲಾಗಿದೆ.

ಗೋವುಗಳ ಪೋಷಣೆಗೆ ಪುಣ್ಯಕೋಟಿ ದತ್ತು ಯೋಜನೆ ಜಾರಿಗೆ ತರಲಾಗಿದ್ದು, ಈ ಯೋಜನೆ ಜಾರಿಗೆ ತಂದ ದೇಶದ ಮೊದಲ ರಾಜ್ಯ ಕರ್ನಾಟಕ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ.

ಗೋವುಗಳ ರಕ್ಷಣೆಗಾಗಿ ಗೋ ಹತ್ಯೆ ನಿಷೇಧ ಕಾಯ್ದೆ ಜಾರಿಗೆ ತರಲಾಗಿದೆ. ಜಲ್

ಜೀವನ್ ಮಿಷನ್ ಯೋಜನೆಯಡಿ ಮನೆ ಮನೆಗೂ ನೀರಿನ ಸೌಲಭ್ಯ ಒದಗಿಸಲಾಗಿದೆ.

ಪ್ರತಿ ಶಾಲೆಯಲ್ಲಿ ಕಲಿಕಾ ಚೇತರಿಕೆ ಕಾರ್ಯಕ್ರಮ ರೂಪಿಸಲಾಗಿದೆ. ಕಲ್ಯಾಣ ಕರ್ನಾಟಕ ಭಾಗದ ಮಕ್ಕಳಿಗಾಗಿ ಶಾಲೆಯಲ್ಲಿ ಮೊಟ್ಟೆ, ಬಾಳೆಹಣ್ಣು, ಹಾಲು ವಿತರಣೆ ಮಾಡಲಾಗುತ್ತಿದೆ.

ಮೀನುಗಾರರ ಮಕ್ಕಳಿಗೂ ವಿದ್ಯಾನಿಧಿ ಯೋಜನೆ ವಿಸ್ತರಿಸಲಾಗಿದೆ. 10.79 ಲಕ್ಷ ವಿದ್ಯಾರ್ಥಿಗಳಿಗೆ 484 ಕೋಟಿ ರೂ ವಿದ್ಯಾರ್ಥಿ ವೇತನ ನೀಡಲಾಗಿದೆ. 150 ಕೋಟಿ ವೆಚ್ಚದಲ್ಲಿ 1 ಲಕ್ಷದ 614 ವಿದ್ಯಾರ್ಥಿನಿಯರಿಗೆ ಓಬವ್ವ ಆತ್ಮರಕ್ಷಣಾ ಕಲೆ ತರಬೇತಿ ನೀಡಲಾಗುತ್ತಿದೆ.

ಬಾಲ್ಯವಿವಾಹ ತಡೆಗೆ ಸ್ಫೂರ್ತಿ ಯೋಜನೆ ಅನುಷ್ಠಾನಕ್ಕೆ ತರಲಾಗಿದೆ ಎಂದು ತಿಳಿಸಿದರು.

ದೇಶದಲ್ಲಿಯೇ ಎನ್ ಇಪಿಯನ್ನು ಜಾರಿಗೆ ತಂದ ಮೊದಲ ರಾಜ್ಯ ಕರ್ನಾಟಕ. ಸಮಾಜ ಕಲ್ಯಾಣ ಇಲಾಖೆ ನಿಗಮದಲ್ಲಿ ಮಹಿಳೆಯರಿಗೆ ಶೇ.50ರಷ್ಟು ಮೀಸಲಾತಿ ನೀಡಲಾಗಿದೆ. ಕೇಂದ್ರ ರಕ್ಷಣಾ ಸಚಿವಾಲಯದಡಿ ಬೆಳಗಾವಿಯಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸೈನಿಕ ಶಾಲೆಯನ್ನು ತೆರೆಯಲಾಗಿದೆ. ರಾಜ್ಯದಲ್ಲಿ 200ಕ್ಕೂ ಹೆಚ್ಚು ನಮ್ಮ ಕ್ಲಿನಿಕ್ ಆರಂಭಿಸಲಾಗಿದೆ. ಚಿಕ್ಕಮಗಳೂರು, ಚಿಕ್ಕಬಳ್ಳಾಪುರ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಮೆಡಿಕಲ್ ಕಾಲೇಜುಗಳನ್ನು ಆರಂಭಿಸಲಾಗಿದೆ.

ನಿರುದ್ಯೋಗ ಸಮಸ್ಯೆ ನಿವಾರಣೆಗಾಗಿ ರೋಜ್ ಗಾರ್ ನೀತಿ ಆರಂಭಿಸಲಾಗಿದೆ. ಉದ್ಯೋಗ ಖಾತ್ರಿ ಯೋಜನೆಯಡಿ ಈ ವರ್ಷ 50 ಜನರಿಗೆ ಕೆಲಸ ನೀಡಲಾಗಿದೆ. ವಿಮಾನಯಾನ ಅಭಿವೃದ್ಧಿಗೆ ಒತ್ತು ನೀಡಲಾಗಿದ್ದು, ಶೀಘ್ರದಲ್ಲಿಯೇ ಶಿವಮೊಗ್ಗದಲ್ಲಿ ಏರ್ ಆರೋಗ್ಯ ಚಿಕಿತ್ಸಾಲಯಪೋರ್ಟ್ ಉದ್ಘಾಟನೆಗೊಳ್ಳಲಿದೆ. ವಿಜಯಪುರ, ಹಾಸನ ವಿಮಾನ ನಿಲ್ದಾಣ ಕಾಮಗಾರಿ ಮುಗಿದಿದ್ದು, ರಾಯಚೂರಿನಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ.

ರೈತಶಕ್ತಿ ಯೋಜನೆಯಡಿ ಪ್ರತಿ ಎಕರೆಗೆ 250 ರೂ ಡಿಸೆಲ್ ಸಹಾಯಧನ ನೀದಲಾಗಿದೆ. ಕೃಷಿ ಸಂಜೀವಿನಿ ಯೋಜನೆಯಡಿ 160 ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾಲಯಕ್ಕೆ ಚಾಲನೆ ದೊರೆತಿದೆ. ರೈತರು, ಬಡವರ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ ಬದ್ಧವಾಗಿದ್ದು, ರಾಜ್ಯ ಅಭಿವೃದ್ಧಿಯತ್ತ ದಾಪುಗಾಲಿಟ್ಟಿದೆ ಎಂದು ಹೇಳಿದರು.

ಮೊದಲ ದಿನವೇ ವಿಪಕ್ಷದ ಹಲವು ನಾಯಕರು ಗೈರು

ಬೆಂಗಳೂರು: ರಾಜ್ಯ ವಿಧಾನಮಂಡಲ ಅಧಿವೇಶನ ಶುಕ್ರವಾರದಿಂದ ಆರಂಭವಾಗಿದ್ದು, ಮೊದಲ ದಿನವೇ ವಿರೋಧ ಪಕ್ಷಗಳ ಹಲವು ನಾಯಕರು ಗೈರು ಹಾಜರಾಗಿರುವುದು ಕಂಡು ಬಂದಿದೆ. ವಿಧಾನಮಂಡಲದಲ್ಲಿ ಅಧಿವೇಶನ ನಡೆಯುತ್ತಿದ್ದು, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಜಂಟಿ ಸದನವನ್ನುದ್ದೇಶಿ ಭಾಷಣ ಮಾಡುತ್ತಿದ್ದಾರೆ.

ಈ ಸಂದರ್ಭದಲ್ಲಿ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ, ಜೆಡಿಎಸ್ ಮುಖಂಡ ಹೆಚ್ ಡಿ ಕುಮಾರಸ್ವಾಮಿಯವರು ಗೈರು ಹಾಜರಾಗಿರುವುದು ಎದ್ದು ಕಾಣುತ್ತಿದೆ.

ಇದರ ಜೊತೆಗೆ ವಿಪಕ್ಷ ಉಪ ನಾಯಕ ಕಾಂಗ್ರೆಸ್ಸ ಸತೀಶ್ ಜಾರಕಿಹೊಳಿ, ಲಕ್ಷ್ಮಿ ಹೆಬ್ಬಾಳ್ಕರ್ ಕೂಡ ಹಾಜರಿರದೆ ಇರುವುದು ಕಂಡು ಬಂದಿದೆ. ಸಾಮಾನ್ಯವಾಗಿ ಅಧಿವೇಶನಕ್ಕೆ ವಿರೋಧ ಪಕ್ಷದ ನಾಯಕರಾಗಿ ಸಿದ್ದರಾಮಯ್ಯ ತಪ್ಪದೆ ಭಾಗಿಯಾಗುತ್ತಿದ್ದರು. ಆದರೆ ಪ್ರಜಾಧ್ವನಿ ಯಾತ್ರೆ ಹಿನ್ನೆಲೆಯಲ್ಲಿ ಜಂಟಿ ಅಧಿವೇಶನ ಮೊದಲ ದಿನ ಅವರು ಗೈರಾಗಿದ್ದಾರೆ.

ದೇಶದಲ್ಲೇ ಮೊದಲು: ಸಮುದ್ರದೊಳಗೆ ಮುಂಬೈ- ಅಹ್ಮದಾಬಾದ್ ಬುಲೆಟ್ ರೈಲು ನಿಲ್ದಾಣ

ಮುಂಬೈ: ದಿರ್ಘಾವಧಿ ಕಾಯುವಿಕೆ ನಂತರ, ಮುಂಬೈ-ಅಹ್ಮದಾಬಾದ್ ನಡುವಿನ ಭಾರತದ ಬಹುನಿರೀಕ್ಷಿತ ಹೈಸ್ಪೀಡ್ ರೈಲು (ಬುಲೆಟ್ ರೈಲು ಯೋಜನೆ ಕಾಮಗಾರಿ ಆರಂಭವಾಗಿದೆ.

ಮುಂಬೈ-ಅಹ್ಮದಾಬಾದ್ ಹೈ ಸ್ಪೀಡ್ ರೈಲ್ ಕಾರಿಡಾರ್ ನ ಭಾಗವಾಗಿ ಮಹಾರಾಷ್ಟ್ರದ ಬಾಂದ್ರಾ-ಕುರ್ಲಾ ಕಾಂಪ್ಲೆಕ್ಸ್ (ಬಿಕೆಸಿ) ಹಾಗೂ ಶಿಲ್ಫಾತ ನಡುವಿನ ಡಬಲ್ ಲೈನ್ ಗಾಗಿ ಟನಲ್ ನಿರ್ಮಾಣ ಕಾಮಗಾರಿಗೆ ಫೆ.10 ರಂದು ಚಾಲನೆ ದೊರೆತಿದೆ.

ಒಟ್ಟು 508.17 ಕಿ.ಮೀ ನ ರೈಲು ಮಾರ್ಗದ ಪೈಕಿ 21 ಕಿ.ಮೀ ಟ್ರ್ಯಕ್ ನೆಲದಡಿಯಲ್ಲಿ (ಣಟಿಜಜಡಿರಡಿಠಣಟಿಜ) ನಲ್ಲಿ ನಿರ್ಮಾಣವಾಗಲಿದ್ದು, ನೆಲದಡಿಯಲ್ಲಿ ನಿರ್ಮಾಣವಾಗುತ್ತಿರುವ ಏಕೈಕ ರೈಲು ಮಾರ್ಗ ಇದಾಗಿದ್ದು ಉಳಿದ ಮಾರ್ಗ ಎತ್ತರದಲ್ಲಿ ಹಾದುಹೋಗಲಿದೆ.

ಈ ಟನಲ್ ನಿರ್ಮಾಣವಾಗುವ ಸುತ್ತಮುತ್ತಲ ಪ್ರದೇಶ (ಥಾಣೆ ಕ್ರೀಕ್, ಅಥವಾ ಥಾಣೆ ತೊರೆ)ಯಲ್ಲಿ ಪಕ್ಷಿಧಾಮ ಹಾಗೂ ಮ್ಯಾಂಗ್ರೋವ್ಸ್ ಇರುವುದರಿಂದ ಅವುಗಳ ಭದ್ರತೆಯನ್ನು ಖಾತ್ರಿಪಡಿಸಿಕೊಳ್ಳಲಾಗುತ್ತಿದೆ. ನೆಲದಡಿಯಲ್ಲಿ ನಿರ್ಮಾಣವಾಗುತ್ತಿರುವ ರೈಲು ಮಾರ್ಗಕ್ಕೆ ನೈಸರ್ಗಿಕ ಬೆಳಕನ್ನು ಒದಗಿಸುವ ದೃಷ್ಟಿಯಿಂದ ಸ್ಕೈಲೈಟ್ ವ್ಯವಸ್ಥೆಯನ್ನೂ ಕಲ್ಪಿಸಲಾಗಿದೆ ಎಂದು ಈ ಯೋಜನೆಯನ್ನು ಸಾಕಾರಗೊಳಿಸುತ್ತಿರುವ ತಂಡದ ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ.

ನ್ಯಾಯಮೂರ್ತಿಗಳ ನೇಮಕ: ಸರ್ವೋಚ್ಚ ನ್ಯಾಯಾಲಯಕ್ಕೆ ಪೂರ್ಣ ಶಕ್ತಿ

ನವದೆಹಲಿ: ಹೈಕೋರ್ಟ್‌ನ ಇಬ್ಬರು ಮುಖ್ಯ ನ್ಯಾಯಮೂರ್ತಿಗಳನ್ನು ಶುಕ್ರವಾರ ಸುಪ್ರೀಂ ಕೋರ್ಟ್‌ನ ನ್ಯಾಯಮೂರ್ತಿಗಳನ್ನಾಗಿ ನೇಮಕ ಮಾಡಲಾಗಿದ್ದು, ಈ ಮೂಲಕ ಸುಪ್ರೀಂ ಕೋರ್ಟ್‌ನ 34 ನ್ಯಾಯಮೂರ್ತಿಗಳ ಸ್ಥಾನಗಳೂ ಭರ್ತಿಯಾದಂತಾಗಿದೆ.

ಈ ಬಗ್ಗೆ ಕೇಂದ್ರ ಕಾನೂನು ಸಚಿವ ಕಿರಣ್ ರಿಜಿಜು ಟ್ವೀಟ್ ಮಾಡಿ ಮಾಹಿತಿ ನೀಡಿದ್ದು, 'ಭಾರತದ ಸಂವಿಧಾನದ ನಿಬಂಧನೆಗಳ ಪ್ರಕಾರ ಭಾರತದ ಗೌರವಾನ್ವಿತ ರಾಷ್ಟ್ರಪತಿಗಳು ಇಬ್ಬರು ಹೈಕೋರ್ಟ್‌ಗಳ ಮುಖ್ಯ ನ್ಯಾಯಮೂರ್ತಿಗಳನ್ನು ಸುಪ್ರೀಂ ಕೋರ್ಟ್‌ನ ನ್ಯಾಯಮೂರ್ತಿಗಳನ್ನಾಗಿ ನೇಮಿಸಿದ್ದಾರೆ. ಅಲಹಾಬಾದ್ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ರಾಜೇಶ್ ಬಿಂದಾಲ್, ಗುಜರಾತ್ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಅರವಿಂದ್ ಕುಮಾರ್ ಅವರನ್ನು ಸುಪ್ರೀಂ ಕೋರ್ಟ್‌ನ ನ್ಯಾಯಮೂರ್ತಿಗಳನ್ನಾಗಿ ನೇಮಿಸಲಾಗಿದೆ. ಅವರಿಗೆ ನನ್ನ ಶುಭಾಶಯಗಳು' ಎಂದು ಟ್ವೀಟ್ ಮಾಡಿದ್ದಾರೆ.

ಇಬ್ಬರ ಹೆಸರುಗಳನ್ನು ಸುಪ್ರೀಂ ಕೋರ್ಟ್ ಕೊಲಿಜಿಯಂ ಕಳೆದ ತಿಂಗಳು ಶಿಫಾರಸು ಮಾಡಿತ್ತು. ಅವರು ಪ್ರಮಾಣವಚನ ಸ್ವೀಕರಿಸಿದ ನಂತರ, ಮುಖ್ಯ ನ್ಯಾಯಮೂರ್ತಿಯೂ ಸೇರಿದಂತೆ 34 ನ್ಯಾಯಾಧೀಶರ ಸಂಪೂರ್ಣ ಬಲವನ್ನು ಸುಪ್ರೀಂ ಕೋರ್ಟ್ ಪಡೆದುಕೊಳ್ಳಲಿದೆ. ಕಳೆದ ವಾರ ಸುಪ್ರೀಂ ಕೋರ್ಟ್‌ಗೆ ಐವರು ನ್ಯಾಯಮೂರ್ತಿಗಳು ನೇಮಕಗೊಂಡಿದ್ದರು.

ಕರ್ನಾಟಕ ಮೂಲದ ನ್ಯಾ. ಅರವಿಂದ್ ಕುಮಾರ್ ಅವರನ್ನು 2021ರ ಅಕ್ಟೋಬರ್‌ನಲ್ಲಿ ಗುಜರಾತ್ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಯನ್ನಾಗಿ ನೇಮಿಸಿ ಪದೋನ್ನತಿ ನೀಡಲಾಗಿತ್ತು.

ರಾಜೇಶ್ ಬಿಂದಾಲ್ ಅವರು ಸದ್ಯ ಅಲಾಹಾಬಾದ್ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಯಾಗಿದ್ದು, ಅರವಿಂದ್ ಕುಮಾರ್ ಅವರು ಗುಜರಾತ್ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಯಾಗಿದ್ದಾರೆ. ಈ ಇಬ್ಬರ ಹೆಸರನ್ನು ಸುಪ್ರೀಂ ಕೋರ್ಟ್ ಕೊಲಿಜಿಯಂ ಜನವರಿ 31ರಂದು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಿತ್ತು.

ಡಿಕೆ ಶಿವಕುಮಾರ್‌ಗೆ ಹೈಕೋರ್ಟ್ ನಿಂದ ಬಿಗ್ ರಿಲೀಫ್

ಬೆಂಗಳೂರು: ಆದಾಯ ಮೀರಿ ಆಸ್ತಿ ಗಳಿಕೆ ಪ್ರಕರಣ-ಕ್ಕೆ ಸಂಬಂಧಿಸಿದಂತೆ ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಗೆ ಹೈಕೋರ್ಟ್ ಶುಕ್ರವಾರ ಬಿಗ್ ರಿಲೀಫ್ ನೀಡಿದೆ. ಫೆ.24ರವರೆಗೂ ಸಿಬಿಐ ತನಿಖೆಗೆ ಮಧ್ಯಂತರ ತಡೆ ನೀಡಿ ಉಚ್ಚ ನ್ಯಾಯಾಲಯ ತೀಪು ಪ್ರಕಟಿಸಿದೆ.

ತನಿಖಾಧಿಕಾರಿ ಫೆ.24ರೊಳಗೆ ತನಿಖೆಯ ಪ್ರಗತಿ ವರದಿ ಸಲ್ಲಿಸಲಿ, ಅಲ್ಲಿಯವರೆಗೂ ಸಿಬಿಐ ತನಿಖೆ ಮುಂದುವರೆಸದಂತೆ ಹೈಕೋರ್ಟ್ ಸೂಚನೆ ನೀಡಿದೆ. ಇದರಿಂದಾಗಿ ಡಿಕೆ ಶಿವಕುಮಾರ್ ಗೆ ಸ್ವಲ್ಪ ದಿನಗಳ ಸಮಾಯವಕಾಶ ದೊರೆತಿದ್ದು, ಸದ್ಯ ನಿರಾಳರಾಗಿದ್ದಾರೆ.

ಈ ಪ್ರಕರಣದಲ್ಲಿ ಸಿಬಿಐ ತನಿಖೆಗೆ ತಡೆ ಕೋರಿ ಡಿಕೆ ಶಿವಕುಮಾರ್ ಹೈಕೋರ್ಟ್ ಗೆ ಅರ್ಜಿ ಸಲ್ಲಿಸಿದ್ದರು. ಸಿಬಿಐ ಅಧಿಕಾರಿಗಳು ಪದೇ ಪದೇ ನೋಟಿಸ್ ನೀಡುತ್ತಿದ್ದಾರೆ. ಹೆಂಡತಿ, ಮಗಳಿಗೆ ನೋಟಿಸ್ ನೀಡುವ ಮೂಲಕ ಮಾನಸಿಕ ಒತ್ತಡ ಹೇರುತ್ತಿದ್ದಾರೆ ಎಂದು ಆರೋಪಿಸಿದ್ದರು.

ಹೆರಾಯಿನ್, ಪಿಸ್ತೂಲ್ ಸಾಗಿಸುತ್ತಿದ್ದ ಪಾಕ್ ಡ್ರೋನ್ ಹೊಡೆದುರುಳಿಸಿದ ಬಿಎಸ್‌ಎಫ್

ನವದೆಹಲಿ: ಪಾಕಿಸ್ತಾನದಿಂದ ಭಾರತದ ಗಡಿಯೊಳಗೆ ಹೆರಾಯಿನ್, ಪಿಸ್ತೂಲ್ ಸಾಗಿಸುತ್ತಿದ್ದ ಡ್ರೋನ್ ವೊಂದನ್ನು ಗಡಿ ಭದ್ರತಾ ಪಡೆ (ಬಿಎಸ್‌ಎಫ್) ಯೋಧರು ಶುಕ್ರವಾರ ಹೊಡೆದುರುಳಿಸಿದ್ದಾರೆ.

ಗಡಿ ಭದ್ರತಾ ಪಡೆ (ಬಿಎಸ್‌ಎಫ್) ಪಾಕಿಸ್ತಾನದ ಕಡೆಯಿಂದ ಭಾರತದ ಭೂಪ್ರದೇಶಕ್ಕೆ ಒಳನುಗ್ಗಲು ಪ್ರಯತ್ನಿಸುತ್ತಿದ್ದ ಡ್ರೋನ್ ಅನ್ನು ಹೊಡೆದುರುಳಿಸಿದೆ ಎಂದು ಬಿಎಸ್‌ಎಫ್ ಅಧಿಕಾರಿ ಶುಕ್ರವಾರ ತಿಳಿಸಿದ್ದು, ಬಿಎಸ್‌ಎಫ್ ನೆಲಕ್ಕುರುಳಿದ ಡ್ರೋನ್‌ನಿಂದ 3 ಕೆಜಿ ಹೆರಾಯಿನ್, ಒಂದು ಚೀನಾ ನಿರ್ಮಿತ ಪಿಸ್ತೂಲ್, ಕಾರ್ಟ್ರಿಡ್ಜ್‌ಗಳು ಮತ್ತು ಮ್ಯಾಗಜೀನ್ ಅನ್ನು ವಶಪಡಿಸಿಕೊಂಡಿದೆ ಎಂದು ಹೇಳಿದ್ದಾರೆ.

ಪಂಜಾಬ್‌ನ ಸೆಕ್ಟರ್ ಫಿರೋಜ್‌ಪುರದ ಃಔಕ ಒಫ ಉತ್ತರದ ಂಔಖ ನಲ್ಲಿ ಪಾಕಿಸ್ತಾನದೊಂದಿಗಿನ ಅಂತರಾಷ್ಟ್ರೀಯ ಗಡಿಯಲ್ಲಿ ಡ್ರೋನ್ ಅನ್ನು ನಿಯೋಜಿಸಲಾಗಿದೆ ಎಂದು ಃಖಈ ಹೇಳಿದೆ.

ಡ್ರೋನ್ ಪತ್ತೆಯಾಗುತ್ತಿದ್ದಂತೆಯೇ ಕೌಂಟರ್-ಡ್ರೋನ್ ಕ್ರಮಗಳನ್ನು ಪ್ರಾರಂಭಿಸಲಾಯಿತು ಮತ್ತು ಡ್ರೋನ್ ಮೇಲೆ ಗುಂಡು ಹಾರಿಸಲಾಯಿತು.

ಬಿಎಸ್‌ಎಫ್ ಪಡೆಗಳು ನಂತರದ ಹುಡುಕಾಟದ ಸಮಯದಲ್ಲಿ, ಸುಮಾರು 3 ಕೆಜಿ ಹೆರಾಯಿನ್, ಒಂದು ಚೀನಾ ನಿರ್ಮಿತ ಪಿಸ್ತೂಲ್, ಕಾರ್ಟ್ರಿಡ್ಜ್‌ಗಳು ಮತ್ತು ಮ್ಯಾಗಜೀನ್ಗಳನ್ನು ಒಳಗೊಂಡಿರುವ ಒಳನುಗ್ಗಿದ ಡ್ರೋನ್ನಿಂದ ರವಾನೆಯ ಪ್ಯಾಕೆಟ್ ಅನ್ನು ವಶಪಡಿಸಿಕೊಳ್ಳಲಾಗಿದೆ" ಎಂದು ಬಿಎಸ್‌ಎಫ್ ಹೇಳಿಕೆ ತಿಳಿಸಿದೆ.

ಕಾರ್ಖಾನೆ ಬಾಯ್ಲರ್ ದುರಂತ; ಓರ್ವ ಸಾವು; ನಾಲ್ವರ ಸ್ಥಿತಿ ಗಂಭೀರ

ಬಾಗಲಕೋಟೆ: ಸಕ್ಕರೆ ಕಾರ್ಖಾನೆಯ ಬಾಯ್ಲರ್ ಸ್ಫೋಟಗೊಂಡು ವ್ಯಕ್ತಿಯೋರ್ವ ಸಾವನ್ನಪ್ಪಿರುವ ಘಟನೆ ಬಾಗಲಕೋಟೆ ಜಿಲ್ಲೆಯ ಮುಧೋಳ ತಾಲೂಕಿನಲ್ಲಿ ನಡೆದಿದೆ.

ಸಚಿವ ಮುರುಗೇಶ್ ನಿರಾಣಿ ಒಡೆತನದ ಸಕ್ಕರೆ ಕಾರ್ಖಾನೆ ಇದಾಗಿದ್ದು, ಬಾಯ್ಲರ್ ಕ್ಲೀನ್ ಮಾಡುವಾಗ ಏಕಾಏಕಿ ಬಾಯ್ಲರ್ ಓಪನ್ ಆಗಿದೆ. ಇದರಿಂದಾಗಿ ಬಿಸಿ ಹಬೆಯಿಂದ ಸುಟ್ಟುಗಾಯಗೊಂಡಿದ್ದ ಯುವಕ ಸಾವನ್ನಪ್ಪಿದ್ದಾನೆ.

27 ವರ್ಷದ ಗುರುನಾಥ್ ಹುಚ್ಚಣ್ಣವರ್ ಮೃತ ಯುವಕ. ಘಟನೆಯಲ್ಲಿ ನಾಲ್ವರು ಗಾಯಗೊಂಡಿದ್ದು, ಮುಧೋಳ ಆಸ್ಪತ್ರೆಗೆ ದಾಖಲಿಸಲಾಗಿದೆ.

ಇಸ್ರೋದಿಂದ 3 ಉಪಗ್ರಹಗಳನ್ನು ಹೊತ್ತ ಹೊಸ ರಾಕೆಟ್ SSLV-D2 ಉಡಾವಣೆ

ಶ್ರೀಹರಿಕೋಟ: ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಇಸ್ರೋ) 3 ಉಪಗ್ರಹಗಳನ್ನು ಹೊತ್ತ ಹೊಸ ರಾಕೆಟ್ SSLV-D2ನ್ನು ಇಂದು ಯಶಸ್ವಿಯಾಗಿ ಉಡಾವಣೆ ಮಾಡಿದೆ.

ಆಂಧ್ರಪ್ರದೇಶದ ಶ್ರೀಹರಿಕೋಟದಲ್ಲಿರುವ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದ ಮೊದಲ ಉಡಾವಣಾ ಕೇಂದ್ರದಿಂದ ಸಣ್ಣ ಉಪಗ್ರಹ ಉಡಾವಣಾ ವಾಹನದ (ಎಸ್‌ಎಸ್‌ಎಲ್‌ವಿ-ಡಿ2) ಎರಡನೇ ಆವೃತ್ತಿಯನ್ನು ಪ್ರಾರಂಭಿಸಿದೆ.

ಹೊಸ ರಾಕೆಟ್ ಮೂರು ಉಪಗ್ರಹಗಳನ್ನು ಹೊತ್ತೊಯ್ಯುತ್ತಿದ್ದು, ಇಸ್ರೋದ ಇಒಎಸ್-07, ಅಮೆರಿಕ ಮೂಲದ ಸಂಸ್ಥೆ ಅಂಟಾರಿಸ್‌ನ ಜಾನಸ್-1 ಮತ್ತು ಚೆನ್ನೈ ಮೂಲದ ಬಾಹ್ಯಾಕಾಶ ಸ್ಟಾರ್ಟಅಪ್ ಸ್ಪೇಸ್ ಕಿಡ್ಜ್‌ನ ಆಜಾದಿಸ್ಯಾಟ್-2 ಎಂದು ಇಸ್ರೋ ತಿಳಿಸಿದೆ.

ಈ ಕುರಿತು ಇಸ್ರೋ ಟ್ವೀಟ್ ಮಾಡಿದ್ದು ಉಪಗ್ರಹ ಹೊತ್ತೊಯ್ಯುವ ರಾಕೆಟ್ ಫೋಟೊಗಳನ್ನು ಹಂಚಿಕೊಂಡಿದೆ.

ಕೆಂಗಲ್ ಹನುಮಂತಯ್ಯರ ಕುರಿತ ಗ್ರಂಥ ಇದೇ ವರ್ಷ ಬಿಡುಗಡೆ: ಮುಖ್ಯಮಂತ್ರಿ ಬೊಮ್ಮಾಯಿ

ಬೆಂಗಳೂರು: ಪ್ರತಿ ಕನ್ನಡಿಗನಿಗೂ ಮಾಜಿ ಮುಖ್ಯಮಂತ್ರಿ ಕೆಂಗಲ್ ಹನುಮಂತಯ್ಯ ಅವರ ಬದುಕು, ಹೋರಾಟದ ಬಗ್ಗೆ ಪರಿಚಯಿಸುವ ಗ್ರಂಥವನ್ನು ಇದೇ ವರ್ಷ ಬಿಡುಗಡೆ ಮಾಡಲಾಗುವುದು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದರು.

ಅವರು ಇಂದು ಮಾಜಿ ಮುಖ್ಯಮಂತ್ರಿ ದಿ. ಕೆಂಗಲ್ ಹನುಮಂತಯ್ಯನವರ 115 ನೇ ಜನ್ಮದಿನಾಚಾರಣೆಯ ಅಂಗವಾಗಿ ಅವರ ಪ್ರತಿಮೆ ಬಳಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಪುಷ್ಪನಮನ ಸಲ್ಲಿಸಿದ ನಂತರ ಮಾಧ್ಯಮದವರಿಗೆ ಪ್ರತಿಕ್ರಿಯೆ ನೀಡಿದರು.

ಕರ್ನಾಟಕದ 2 ನೇ ಮುಖ್ಯಮಂತ್ರಿ , ಧೀಮಂತ ನಾಯಕ, ಕೇಂದ್ರ ರೈಲ್ವೆ ಸಚಿವ, ಕರ್ನಾಟಕದ ಏಕೀಕರಣದಲ್ಲಿ ಮಹತ್ವದ ಪಾತ್ರ ವಹಿಸಿದ್ದ ಕೆಂಗಲ್ ಹನುಮಂತಯ್ಯನವರಿಗೆ ಇಂದು ಅವರ ಜನ್ಮದಿನದಂದು ಗೌರವಾರ್ಪಣೆ ಮಾಡಿದ್ದೇವೆ.

**ಪ್ರತ

ಕೌಜಲಗಿ ತಾಲ್ಲೂಕು ರಚನೆಗೆ ಮುಖ್ಯಮಂತ್ರಿಗಳಿಂದ ಸಕಾರಾತ್ಮಕ ಸ್ಪಂದನೆ: ಶಾಸಕ ಬಾಲಚಂದ್ರ ಜಾರಕಿಹೊಳಿ

ಗೋಕಾಕ : ಗೋಕಾಕ ತಾಲೂಕಿನಲ್ಲಿರುವ ಕೌಜಲಗಿಯನ್ನು ಹೊಸ ತಾಲೂಕು ಕೇಂದ್ರವನ್ನಾಗಿ ರಚಿಸುವಂತೆ ಆಗ್ರಹಿಸಿ ಕೆಎಂಎಫ್ ಅಧ್ಯಕ್ಷ ಹಾಗೂ ಅರಭಾವಿ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದರು.

ಗುರುವಾರ ರಾತ್ರಿ ಬೆಂಗಳೂರಿನ ರೇಸ್ಕೋರ್ಸ್ ರಸ್ತೆಯಲ್ಲಿರುವ ಮುಖ್ಯಮಂತ್ರಿಗಳ ಗೃಹ ಕಛೇರಿಯಲ್ಲಿ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿದ ಬಾಲಚಂದ್ರ ಜಾರಕಿಹೊಳಿ ಅವರು ಗೋಕಾಕ

ತಾಲೂಕಿನ ಕೌಜಲಗಿ ಪಟ್ಟಣವು ಪ್ರಮುಖ ಹೋಬಳಿಯಾಗಿದ್ದು, ಸುತ್ತಮುತ್ತಲಿನ 50ಕ್ಕೂ ಅಧಿಕ ಗ್ರಾಮಗಳಿಗೆ ಕೌಜಲಗಿಯು ಕೇಂದ್ರ ಸ್ಥಾನವಾಗಿದೆ ಎಂದು ಮನವಿಯಲ್ಲಿ ಮುಖ್ಯಮಂತ್ರಿಗಳಿಗೆ ತಿಳಿಸಿದ್ದಾರೆ.

ಕಳೆದ 5 ದಶಕಗಳಿಂದ ಕೌಜಲಗಿಯನ್ನು ತಾಲೂಕು ಕೇಂದ್ರವನ್ನಾಗಿ ರಚಿಸುವಂತೆ ಕೌಜಲಗಿ ಭಾಗದ ಜನರು ಹೋರಾಟ ಮಾಡಿಕೊಂಡು ಬರುತ್ತಿದ್ದಾರೆ. ಆದ್ದ–ರಿಂದ ಆಡಳಿತಾತ್ಮಕ ಹಿತದೃಷ್ಟಿಯಿಂದ ಕೌಜಲಗಿಯನ್ನು ಹೊಸ ತಾಲೂಕು ಕೇಂದ್ರವನ್ನಾಗಿ ರಚಿಸುವಾಗಿದೆ. ತಾಲೂಕುಗಳ ಪುನರ್ ವಿಂಗಡಣಾ ಸಮೀತಿಗಳಾದ ವಾಸುದೇವರಾವ್, ಹುಂಡೇಕರ್, ಗದ್ದಿಗೌಡರ ಆಯೋಗಗಳು ಆಗಿನ ಸರ್ಕಾರಗಳಿಗೆ ಕೌಜಲಗಿಯು ತಾಲೂಕು ಕೇಂದ್ರವಾಗಲಿಕ್ಕೆ ಅತ್ಯಂತ ಸೂಕ್ತವೆಂದು ವರದಿಗಳನ್ನು ಸಲ್ಲಿಸಿದ್ದವು ಎಂದು ಬಾಲಚಂದ್ರ ಜಾರಕಿಹೊಳಿ ಅವರು ಮುಖ್ಯಮಂತ್ರಿಗಳ ಗಮನಕ್ಕೆ ತಂದರು.

ಹೊಸ ತಾಲೂಕುಗಳ ಪುನರ್ರಚನೆ ಸಂದರ್ಭದಲ್ಲಿ ಬೆಳಗಾವಿ ಜಿಲ್ಲೆಯ ಕೌಜಲಗಿಯನ್ನು ತಾಲೂಕು ಕೇಂದ್ರವನ್ನಾಗಿ ರಚಿಸುವುದರ ಬಗ್ಗೆ ಪರಾಮರ್ಶೆ ಮಾಡುತ್ತೇನೆ ಎಂದು ಮುಖ್ಯಮಂತ್ರಿಗಳು ಭರವಸೆ ನೀಡಿದ್ದು, ನಮ್ಮ ಮನವಿಗೆ ಸಿಎಂ ಬಸವರಾಜ ಬೊಮ್ಮಾಯಿ ಅವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ಶಾಸಕ ಬಾಲಚಂದ್ರ ಜಾರಕಿಹೊಳಿ ತಿಳಿಸಿದರು.

6ನೇ ತರಗತಿ ವಸತಿ ಶಾಲೆಗಳ ಪ್ರವೇಶಾತಿಗೆ ಅರ್ಜಿ ಆಹ್ವಾನ

ಬೆಳಗಾವಿ: 2023–2024 ನೇ ಸಾಲಿಗ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ಬೆಳಗಾವಿ ಜಿಲ್ಲೆಯಲ್ಲಿ ಮೊರಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ ಹಾಗೂ ಇತರೆ ವಸತಿ ಶಾಲೆಗಳ 6ನೇ ತರಗತಿಯ ದಾಖಲಾತಿಗಾಗಿ ಮಾರ್ಚ್ 12, 2023 ರಂದು ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ವರೆಗೆ ಪರೀಕ್ಷೆ ನಡೆಯಲಿದೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA) ವತಿಯಿಂದ ಪ್ರವೇಶ ಪರೀಕ್ಷೆ ಮತ್ತು ಆನ್‌ಲೈನ್ ಕೌನ್ಸಿಲಿಂಗ್ ನಡೆಸಲಾಗುವುದು.

ಪ್ರಸ್ತುತ 5ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಪಾಲಕರು/ಪೋಷಕರು ತಮ್ಮ ಮಕ್ಕಳನ್ನು 6ನೇ ತರಗತಿಗೆ ವಸತಿ ಶಾಲೆಗಳಿಗೆ ದಾಖಲಿಸಲು ಜನವರಿ 5, 2023 ರಿಂದ ಜನವರಿ 22 ರವರೆಗೆ ಅವಶ್ಯಕ ದಾಖಲಾತಿಗಳೊಂದಿಗೆ ತಮ್ಮ ಹತ್ತಿರದ ವಸತಿ ಶಾಲೆಗಳ ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೀದಿ ದೀಪಗಳು ಅಳವಡಿಸಿ; ಅನೈತಿಕ ಚಟುವಟಿಕೆಗಳಿಗೆ ಬ್ರೇಕ್ ಹಾಕಿ: ಡಾ.ಡಿ.ಎಲ್.ರಮೇಶ್ ಗೋಪಾಲ್

ಬಳ್ಳಾರಿ : ನಗರದ ಸಾಂಸ್ಕೃತಿಕ ಸಮುಚ್ಚಯದ ಆವರಣದಲ್ಲಿನ ಬೀದಿ ದೀಪಗಳನ್ನು ದುರಸ್ಥಿ ಮಾಡುವಂತೆ ವಾಕಿಂಗ್ ಗ್ರೂಪ್‌ನ ಮುಖ್ಯಸ್ಥ ಡಾ.ಡಿ.ಎಲ್.ರಮೇಶ್ ಗೋಪಾಲ್ ಪಾಲಿಕೆ ಆಯುಕ್ತರಿಗೆ ಮನವಿ ಮಾಡಿದ್ದಾರೆ. ರಾತ್ರಿಯಾದರೆ ಬೀದಿ ದೀಪಗಳಿಲ್ಲದೆ ಕತ್ತಲಾಗುತ್ತದೆ.

ರಾತ್ರಿ 8 ಗಂಟೆ ವರೆಗೆ ತೆರಿದಿರುವ ಆವರಣದಲ್ಲಿ ಕತ್ತಲೆಯಿಂದ ವಾಕಿಂಗ್ ಮಾಡಲು ಸಮಸ್ಯೆ ಅಲ್ಲದೆ.

ಇನ್ನಿತರ ಅನೈತಿಕ ಚಟುವಟಿಗಳಿಗೂ ಎಡೆಮಾಡಿ ಕೊಟ್ಟಂತಾಗುತ್ತದೆ.

ಅದಕ್ಕಾಗಿ ಬೀದಿ ದೀಪ ಅಳವಡಿಸಿ ಎಂದು ಕೇಳಿದ್ದಾರೆ. ಈ ಮೊದಲು ಅಲಂಕಾರಿಕ ದೀಪಗಳ ವ್ಯವಸ್ಥೆಯಿಂದ ಆವರಣ ಜಗ ಮಗಿಸುತ್ತಿತ್ತು. ಆದರೆ ಅವು ಕೆಲ ದಿನಗಳಲ್ಲೇ ದುರಸ್ಥಿಗೆ ಬಂದವು.

ಈ ರೀತಿ ಪರ್ಸೆಂಟೇಜ್ ಹಣಕ್ಕಾಗಿ ಕೆಲಸ ಮಾಡಿಸದೆ. ಶಾಶ್ವತವಾದ ಕಾಮಗಾರಿ ಮಾಡಿಸಬೇಕಿದೆ. ವಾಕಿಂಗ್ ಗ್ರೂಪ್ ಅವರ ಮನವಿಯ ಮೇರೆಗೆ ನಗರ ಶಾಸಕರು ತಮ್ಮ ಶಾಸಕರ ಅನುದಾನದಡಿ ಬೀದಿ ದೀಪ ಅಳವಡಿಕೆಗೆ ಪಾಲಿಕೆಯ ಆಯುಕ್ತರಿಗೆ ಸೂಚಿಸಿದ್ದರಂತೆ. ಆದರೆ ಈ ವರಗೆ ಕೆಲಸ ಮಾತ್ರ ಆಗಿಲ್ಲ.

ಸಂಜೆ 6 ಗಂಟೆಯ ನಂತರ ಜಿಲ್ಲಾ ಗ್ರಂಥಾಲಯ ಆವರಣದಲ್ಲಿ ವಿದ್ಯುತ್ ದೀಪಗಳು ಸರಿಯಾಗಿ ಕಾರ್ಯನಿರ್ವಹಿಸದ ಕಾರಣ ಕತ್ತಲಾಗುತ್ತಿದೆ.

ಸಂಜೆ ವಾಕಿಂಗ್ ಮಾಡುವವರು ಮತ್ತು ಕೆಲವು ವಿದ್ಯಾರ್ಥಿನಿಯರು ಆವರಣವನ್ನು ಬಳಸಲು ಭಯಪಡುತ್ತಾರೆ.

ದಯವಿಟ್ಟು 25 ದೀಪಗಳು ಮತ್ತು ಇತರ ಅಗತ್ಯ ಉಪಕರಣಗಳನ್ನು ಕಳುಹಿಸಿ, ಇಲ್ಲದಿದ್ದರೆ ಆವರಣವು ಸಮಾಜ ವಿರೋಧಿ ಚಟುವಟಿಕೆಗಳನ್ನು ಆಕರ್ಷಿಸುತ್ತದೆ ಎಂದು ಡಾ.ಡಿ.ಎಲ್.ರಮೇಶ್ ಗೋಪಾಲ್ ಚೇಂಬರ್ ಆಫ್ ಕಾಮರ್ಸ್‌ನ ಮಾಜಿ ಅಧ್ಯಕ್ಷರು ತಿಳಿಸಿದ್ದಾರೆ.

ವಿಧಾನಸಭೆ ಚುನಾವಣೆ ಹಿನ್ನೆಲೆ ದಿವಾಕರಬಾಬು ಸಮಾಲೋಚನಾ ಸಭೆ

ಬಳ್ಳಾರಿ : ಜಿಲ್ಲಾ ಪರಿಶಿಷ್ಟ ಜಾತಿ ವಿಭಾಗದ ಮುಖಂಡರಗಳ ಜೊತೆ ಮಾಜಿ ಸಚಿವ ಎಂ.ದಿವಾಕರಬಾಬುರವರ ಮುಂದಿನ ವಿಧಾನಸಭೆ ಚುನಾವಣೆ ಕುರಿತಂತೆ ಬಳ್ಳಾರಿ ನಗರದಲ್ಲಿ ಸಮಾಲೋಚನಾ ಸಭೆ ನಡೆಸಿದರು. ನಂತರ ಪರಿಶಿಷ್ಟ ಜಾತಿ ಬಳ್ಳಾರಿ ಜಿಲ್ಲಾ ವಿಭಾಗದ ಅಧ್ಯಕ್ಷ ಎರ್ರಕುಲಸ್ವಾಮಿ ಮಾತನಾಡಿ, ಅನೇಕ ವರ್ಷಗಳಿಂದ ಕಾಂಗ್ರೆಸ್ ಪಕ್ಷದಲ್ಲಿ ನಮ್ಮ ಸಮುದಾಯ ತಳಮಟ್ಟದಿಂದ ಪಕ್ಷದ ಬೆಳವಣಿಗೆಗೆ ಶ್ರಮಿಸುತ್ತಿದೆ.

ಆದರೆ ಈ ಬಾರಿ ಸರಳತೆಯ ಹಾಗೂ ಕಾರ್ಮಿಕ. ಹಿಂದೂಳಿದ ಜನರ ಏಳಿಗೆಗೆ ಶ್ರಮಿಸಿದ್ದ ನಾಯಕ ಎಂ.ದಿವಾಕರ ಬಾಬುರವರು ಚುನಾವಣೆಯ ಅಖಾಡಕ್ಕಿಳಿಯಲು ಮುಂದಾಗಿರುವುದು ನಮಗೆ ಸಂತಸ ತಂದಿದೆ. ಅಂದಿನ ರಾಜಕಾರಣದಲ್ಲಿ ತೊಡಗಿ ದಿವಾಕರ ಬಾಬು ರವರು ದೀನ ದಲಿತರ ಶೋಷಣೆಗೆ ಒಳಗಾದ ಹಾಗೂ ಆರ್ಥಿಕವಾಗಿ ಹಿಂದೂಳಿದ ಜನಾಂಗದವರ ಏಳಿಗೆಗಾಗಿ ಶ್ರಮಿಸಿದವರು.

ಬಡಜನತೆಯನ್ನು ಕಂಡೋಡನೆ ನಾಟಕೀಯ ಭರವಸೆ ಮಾತುಗಳನ್ನು ಆಡದೇ ನುಡಿದಂತೆ ನಡೆಯುವ ವ್ಯಕ್ತಿಯಾಗಿದ್ದರು. ಪಕ್ಷ ಇವರಿಗೆ ಟಿಕೇಟ್ ನೀಡಿದರೇ ನಮ್ಮಬೆಂಬಲ, ಬೇರೆಯಾರಿಗೂ ಟಿಕೇಟ್ ನೀಡಿದರು

ಸಹ ನಮ್ಮ ಬೆಂಬಲವಿದೆ. ಪಕ್ಷದ ನಿಲವು ಸಿದ್ದಾಂತಕ್ಕೆ ಪಕ್ಷದ ನಿಷ್ಟೆ ಗೆ ನಾವು ಕಟಿಬದ್ದರಾಗಿದ್ದೇವೆ ಎಂದರು.

ಮಾಜಿ ಸಚಿವ ದಿವಾಕರಬಾಬು ಮಾತನಾಡಿ, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಸಂಪೂರ್ಣ ಭ್ರಷ್ಟಾಚಾರದಲ್ಲಿ ತೊಡಗಿವೆ. ಧರ್ಮಧಾರಿತ, ರಾಜ–ಕಾರಣ, ಜಾತಿ–ಜಾತಿಗಳ ಮಧ್ಯೆ ವಿಷಬೀಜ ಬಿತ್ತುವುದು ಹೆಚ್ಚಾಗಿ ನಡೆದಿದೆ. ಸ್ವಾತಂತ್ರ ಪಡೆಯಲು ಅಂದು ಜಾತಿಮತಗಳ ಎಣಿಸಿದೇ ಹೋರಾಟ ನಡೆಸಲಾಗಿತ್ತು. ಅದನ್ನು ಮರೆಯಬಾರದು ಎಂದರು. ನಾನು ನಗರ ಕಾಂಗ್ರೆಸ್ ಅಭ್ಯರ್ಥಿಗಾಗಿ ಅರ್ಜಿ ಸಲ್ಲಿಸಿದ್ದೇನೆ. ಪಕ್ಷ ನನಗೆ ಟಿಕೇಟ್ ನೀಡಿದರೇ ನಿಮ್ಮ ಬೆಂಬಲ ನೀಡಿ. ಕಾಂಗ್ರೆಸ್ ಪಕ್ಷ ಶಿಸ್ತಿನಪಕ್ಷವಾಗಿದ್ದು, ಪಕ್ಷ ಯಾರಿಗೂ ಟಿಕೆಟ್ ನೀಡಿದರೂ ಸಹ ಅವರಿಗೆ ಬೆಂಬಲ ನೀಡುವ ಮೂಲಕ ಬಿಜೆಪಿಯನ್ನು ಸೋಲಿಸಿ ಕಾಂಗ್ರೆಸ್ ಪಕ್ಷ ಬಲಪಡಿಸಲು ಮನವಿ ಮಾಡಿದರು.

ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಪುನರ್ವಸತಿ ಕಾರ್ಯಕರ್ತರ ಹುದ್ದೆಗಳ ನೇಮಕಾತಿ

ಬೆಳಗಾವಿ : ಬೆಳಗಾವಿ ಜಿಲ್ಲೆಯ ಖಾನಾಪೂರ ಮತ್ತು ರಾಯಬಾಗ ತಾಲೂಕಿನ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಪುನರ್ವಸತಿ ಕಾರ್ಯಕರ್ತರ (ಪ್ಹಿ.ಆರ್.ಡಬ್ಲ್ಯೂ) ಹುದ್ದೆಗಳ ನೇಮಕಾತಿಗಾಗಿ ಆಯಾ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಅರ್ಹ ವಿಕಲಚೇತನ ಅಭ್ಯರ್ಥಿಗಳಿಂದ ಇಲಾಖೆಯ ಗ್ರಾಮೀಣ ಪುನರ್ವಸತಿ ಯೋಜನೆ ಅಡಿ ಮಾಸಿಕ 9000 ರೂಗಳ ಗೌರವಧನ ಆಧಾರದ ಮೇಲೆ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ವಿಕಲಚೇತನ ಅಭ್ಯರ್ಥಿಗಳು ಫೆಬ್ರವರಿ 17, 2023 ರ ಸಂಜೆ 5 ಗಂಟೆಗಳ ಒಳಗಾಗಿ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಪಂಚಾಯತ ಕಾರ್ಯಾಲಯ ಖಾನಾಪೂರ ಮತ್ತು ರಾಯಬಾಗ ಇವರಿಗೆ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಲು ಕೋರಲಾಗಿದೆ.

ಖಾನಾಪೂರ ತಾಲೂಕಿನ ನಾಗರಗಾಳಿ ಗ್ರಾಮ ಪಂಚಾಯಿತಿಯಲ್ಲಿ 1 ಹುದ್ದೆ ಖಾಲಿ ಇರುತ್ತದೆ. ರಾಯಬಾಗ ತಾಲೂಕಿನ ಬೆಕ್ಕೇರಿ(1), ಮೊರಬ(1) ಹಾಗೂ ಹುಬ್ಬರವಾಡಿ(1) ಗ್ರಾಮ ಪಂಚಾಯಿತಿಯಲ್ಲಿ ತಲಾ ಒಂದು ಹುದ್ದೆಗಳು ಖಾಲಿ ಇರುತ್ತವೆ.

ಷರತ್ತುಗಳು:

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ವಿಕಲಚೇತನರಾಗಿದ್ದು, ಶೇಕಡ 40 ರಷ್ಟು ವಿಕಲತೆ ಪ್ರಮಾಣ ಹೊಂದಿರತಕ್ಕದ್ದು, ಗ್ರಾಮ ಪಂಚಾಯತಿಗಳ ವ್ಯಾಪ್ತಿಗೊಳಪಟ್ಟಿರಬೇಕು. ಅರ್ಜಿದಾರರು ಕನಿಷ್ಠ ಎಸ್ಸೆಸ್ಸೆಲ್ಸಿ ಉತ್ತೀರ್ಣ ಅಥವಾ ಅನುತ್ತೀರ್ಣರಾಗಿದ್ದು, ಕಂಪ್ಯೂಟರ್ ಜ್ಞಾನ ಹೊಂದಿರಬೇಕು. ಮತ್ತು ಅರ್ಜಿ ಸಲ್ಲಿಕೆಯ ಕೊನೆಯ ದಿನಾಂಕ ಫೆಬ್ರುವರಿ 17, 2023 ಕ್ಕೆ ಕನಿಷ್ಠ 18 ವರ್ಷ ಹಾಗೂ ಗರಿಷ್ಠ 45 ವರ್ಷ ವಯೋಮಿತಿಯಲ್ಲಿರಬೇಕು.

ವಿಕಲಚೇತನ ಮಹಿಳಾ, ಪ. ಜಾತಿ ಮತ್ತು ಪ. ಪಂಗಡದ ಅಭ್ಯರ್ಥಿಗಳು ಹಾಗೂ ಇಲಾಖೆಯ ಯೋಜನೆಗಳ ಬಗ್ಗೆ ಜ್ಞಾನ ಹೊಂದಿರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ನಾಮದೇವ ಬಿಲ್ಕರ್ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೈಜ ಕಥೆಯ ಮೂಲಕ ಮಹಿಳೆಯರಲ್ಲಿ ಸ್ಫೂರ್ತಿ ತುಂಬಿದ ಉಪನ್ಯಾಸಕ

ಹುಳಿಯಾರು: ದಿನವೊಂದಕ್ಕೆ 5 ರೂ. ಕೂಲಿ ಪಡೆಯುತ್ತಿದ್ದ ಮಹಿಳೆ ಸಾಫ್ಟ್‌ವೇರ್ ಸಿಇಒ ಆದ ನೈಜಕಥೆಯ ಮೂಲಕ ಉಪನ್ಯಾಸಕರೊಬ್ಬರು ಚಿಕ್ಕಬಿದರೆಯಲ್ಲಿ ಶುಕ್ರವಾರ ಧರ್ಮಸ್ಥಳ ಸಂಸ್ಥೆ ಆಯೋಜಿಸಿದ್ದ ಧಾರ್ಮಿಕ ಸಭೆಯಲ್ಲಿ ಪಾಲ್ಗೊಂಡಿದ್ದ ನೂರಾರು ಮಹಿಳೆಯರಿಗೆ ಸ್ಫೂರ್ತಿ ತುಂಬುವ ಕೆಲಸ ಮಾಡಿದ್ದು ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು.

ಹುಳಿಯಾರು–ಕೆಂಕೆರೆ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಶಶಿಭೂಷಣ್ ಅವರು ತಮ್ಮ ಉಪನ್ಯಾಸದಲ್ಲಿ ಬಡ ಕುಟುಂಬದಲ್ಲಿ ಹುಟ್ಟಿದ ಸ್ತ್ರೀಯೊಬ್ಬಳು 16 ವರ್ಷದಲ್ಲೇ ಕೃಷಿಕನನ್ನು ವಿವಾಹವಾಗಿ ದಿನಕ್ಕೆ 5 ರೂಪಾಯಿಗೆ ಗದ್ದೆ ಕೆಲಸ ಮಾಡಿ ಸಂಸಾರ ನಡೆಸುತ್ತಿದ್ದಳು. ಈ ಹಣ ಮಕ್ಕಳ ವಿದ್ಯಾಬ್ಯಾಸಕ್ಕೆ

ಸಾಲದಾದಾಗ ಪತಿಯ ವಿರೋಧದ ನಡುವೆಯೂ ಬಿಎ ಪದವಿ ಪಡೆದು ತನ್ನ ಜೀವನದುದ್ದಕ್ಕೂ ಎತ್ತುಗಳಂತೆ ಕಷ್ಟಪಟ್ಟು ದುಡಿಯುತ್ತಿದ್ದರೂ ಸಾಮಾನ್ಯ ಉದ್ಯೋಗದಲ್ಲಿ ನೆಲೆಸುವ ಬದಲು ದೊಡ್ಡ ಅವಕಾಶಗಳನ್ನು ಹುಡುಕುತ್ತಲೇ ಇದ್ದಳು.

ಅಮೆರಿಕದಲ್ಲಿನ ತನ್ನೂರಿನ ಉದ್ಯೋಗಿಯಿಂದ ಯುನೈಟೆಡ್ ಸ್ಟೇಟ್ಸ್‌ನಲ್ಲಿ ಕೆಲಸ ಮಾಡುವ ಆಸೆ ಚಿಗುರಿ ಕಂಪ್ಯೂಟರ್ ಟ್ರೈನಿಂಗ್ ಪಡೆದು ವೀಸಾ ಪಡೆದು ಯುನೈಟೆಡ್ ಸ್ಟೇಟ್ಸ್ ತೆರಳಿದಳು. ಆರಂಭಿಕ ವರ್ಷಗಳಲ್ಲಿ ವಿವಿಧ ಅರೆಕಾಲಿಕ ಉದ್ಯೋಗಗಳನ್ನು ಮಾಡುತ್ತಿದ್ದ ಆಕೆಗೆ ತನ್ನೂರಿನವರ ಸಹಾಯದಿಂದ ಒಳ್ಳೆಯ ಉದ್ಯೋಗ ಸಿಕ್ಕಿತ್ತಾದರೂ ವೀಸಾದ ಕೊರತೆಯಿಂದಾಗಿ ಆ ಕೆಲಸವನ್ನೂ ಬಿಡಬೇಕಾಗಿ ಬಂದಿತು. ನಂತರ ಪಟ್ಟುಬಿಡದೆ ಛಲದಿಂದ ವೀಸಾ ರಿನಿವಲ್ ಮಾಡಿಕೊಂಡಳಾದರೂ ಇನ್ನೊಬ್ಬರ ಕೈ ಕೆಳಗೆ ಕೆಲಸ ಮಾಡುವ ಬದಲು ಸ್ವಂತ ಕಂಪನಿ ಮಾಡುವ ಇಚ್ಛೆಯಿಂದ ಫೀನಿಕ್ಸ್‌ನಲ್ಲಿ ಕೀ ಸಾಫ್ಟ್‌ವೇರ್ ಸೊಲ್ಯೂಷನ್ ಕಂಪನಿ ಸ್ಥಾಪಿಸಿದರು.

ಈ ಯಶೋಗಾಥೆ ಅನಿಲ ಜ್ಯೋತಿ ರೆಡ್ಡಿಯವರದಾಗಿದ್ದು ಬಡತನ ಮತ್ತು ಅವಮಾನ ಉತ್ತಮ ಭವಿಷ್ಯವನ್ನು ಪಡೆಯಲು ಪ್ರೇರೇಪಿಸುತ್ತದೆ. ನೀವು ಎಷ್ಟು ಕಷ್ಟಪಟ್ಟು ಕೆಲಸ ಮಾಡುತ್ತೀರೋ ಅಷ್ಟು ಅದೃಷ್ಟಶಾಲಿಯಾಗುತ್ತೀರಿ ಎಂಬುದಕ್ಕೆ ಈಕೆ ಜೀವಂತ ಉದಾಹರಣೆಯಾಗಿದ್ದಾಳೆ ಎನ್ನುವ ಸ್ಫೂರ್ತಿದಾಯಕ ಮಾತುಗಳನ್ನು ಕಥೆಯ ಮೂಲಕ ತಿಳಿಸಿದರು.

ಮೆಟ್ರಿಕ್–ನಂತರದ ವಿದ್ಯಾರ್ಥಿವೇತನ ಶುಲ್ಕ ವಿನಾಯಿತಿ, ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯ

ಬೆಳಗಾವಿ: ನಗರದ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ, 2022–23ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಮೆಟ್ರಿಕ್–ನಂತರದ ವಿದ್ಯಾರ್ಥಿವೇತನ", "ಶುಲ್ಕ ವಿನಾಯಿತಿ", "ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆ", ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಜನವರಿ 31/2023ಕ್ಕೆ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಫೆ,28/2023 ರವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ https://ssp.postmatric.karnataka.gov.in ಕಾರ್ಯಕ್ರಮಗಳ ವಿವರ ಅರ್ಹತೆ ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಅದೇಶಗಳ ಬಗ್ಗೆ ಮಾಹಿತಿಗಾಗಿ ನೀಡಬೇಕಾದ ವೆಬ್ ಸೈಟ್ https://bcwd.karnataka.gov.in , ಇಲಾಖಾ ಸಹಾಯವಾಣಿ ಸಂಖ್ಯೆ : 8050770005. ಹಾಗೂ ಇಲಾಖಾ ಇಮೇಲ್ bcwdhelpline@gmail.com ಹಾಗೂ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಸಂಖ್ಯೆ: 080–35254757 ಇಮೇಲ್: postmetrichelp@karnataka.gov.in ಗೆ ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳಾದ ಲಕ್ಷ್ಮಣ ಬಬಲಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರೈತರೆಲ್ಲರೂ ಒಗ್ಗೂಡಿದಾಗ ಮಾತ್ರ ಸಂಘಟನೆ ಸಾಧ್ಯ

ಕಲಕೇರಿ : ರೈತರೆಲ್ಲರೂ ಜಾತಿ ಮತ , ಪಕ್ಷ ಮರೆತು ಒಗ್ಗೂಡಿದಾಗ ಮಾತ್ರ ಸಂಘಟನೆ ಬಲಿಷ್ಠವಾಗುವುದು ಎಂದು ಕಲಕೇರಿಯ ಗುರು ಮರುಳಾರಾಧ್ಯ ಸಂಸ್ಥಾನ ಹಿರೇಮಠದ ಶ್ರೀಗಳಾದ ಸಿದ್ದರಾಮ ಶಿವಾಚಾರ್ಯರು ರಿಬ್ಬನ ಕತ್ತರಿಸಿ , ಪೂಜೆ ಸಲ್ಲಿಸಿ ಮಾತನಾಡಿದರು.

ರಾಜ್ಯಾಧ್ಯಕ್ಷರಾದ ಚೂನಪ್ಪ ಪೂಜಾರಿ ನೇತೃತ್ವದ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಸೇನೆಯ ಕಲಕೇರಿ ಹೋಬಳಿ ಘಟಕದ ಕೇಂದ್ರ ಕಚೇರಿ ಉದ್ಘಾಟನಾ ಸಮಾರಂಭದಲ್ಲಿ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ದಲಿತ ವಿದ್ಯಾರ್ಥಿ ಪರಿಷತ್ ನ ಸಂಸ್ಥಾಪಕ ಅಧ್ಯಕ್ಷರಾದ ಶ್ರೀನಾಥ ಪೂಜಾರಿ, ಬೈರಿ ಪೌಂಡೇಷನ ಅಧ್ಯ

ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ವಿರುದ್ಧ ಪ್ರತಿಭಟನೆ

ಗೋಕಾಕ : ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿಯವರು ಪ್ರಹ್ಲಾದ ಜೋಶಿ ಹಾಗೂ ಇಡೀ ಬ್ರಾಹ್ಮಣ ಸಮಾಜದ ಬಗ್ಗೆ ಅವಹೇಳನಕಾರಿ ಮಾತುಗಳನ್ನಾಡಿದ್ದು ಅವರು ಕೂಡಲೆ ಕ್ಷಮೆ ಕೋರಬೇಕು ಎಂದು ಗೋಕಾಕ ತಾಲೂಕು ಅಖಿಲ ಬ್ರಾಹ್ಮಣ ಸಮಾಜದವರು ಬೃಹತ್ ಪ್ರತಿಭಟನೆ ನಡೆಸಿ ಆಗ್ರಹಿಸಿದರು.

ಶುಕ್ರವಾರದಂದು ನಗರದ ಬಸವೇಶ್ವರ ವೃತ್ತದಲ್ಲಿ ಸೇರಿದಂತೆ ಸಮಾಜ ಭಾಂಧವರು ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ವಿರುದ್ಧ ಘೋಷಣೆಗಳನ್ನು ಕೂಗಿ ತಮ್ಮ ಆಕ್ರೋಶವನ್ನು ವ್ಯಕ್ತಪಡಿಸಿ ತಹಶೀಲ್ದಾರ ಮುಖಾಂತರ ಸರಕಾರಕ್ಕೆ ಮನವಿ ಅರ್ಪಿಸಿದರು.

ಕುಮಾರಸ್ವಾಮಿ ಅವರು ಬ್ರಾಹ್ಮಣ ಸಮುದಾಯವನ್ನು ಅವಹೇಳನ ಮಾಡುವ ಮೂಲಕ ಸಮುದಾಯದ ಸೌಮ್ಯತೆಯ ದುರ್ಲಾಭ ಪಡೆಯುತ್ತಿದ್ದಾರೆ.

ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರು ಇನ್ನು ಮುಂದೆ ಬ್ರಾಹ್ಮಣ ಸಮುದಾಯದ ನಿಂದನೆ ಬಿಟ್ಟು ಗೌರವಯುತ ರಾಜಕಾರಣ ಮಾಡಬೇಕು ಎಂದು ಪ್ರತಿಭಟನಾ ನಿರತರು ಸರಕಾವನ್ನು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಸಮಾಜದ ಮುಖಂಡರುಗಳಾದ ಬಿ ಕೆ ಜೋಶಿ ಹಣಮಂತ ದೇಶಪಾಂಡೆ ಶ್ರೀಧರ್ ಮುತಾಲಿಕದೇಸಾಯಿ ಅನಿಲ ಸುಣಧೋಳಿ ಪ್ರಸನ್ನ ಕುಲಕರ್ಣಿ ಅವಿನಾಶ ಕುಲಕರ್ಣಿ ವಿಶ್ವಾಸ ಸುಣಧೋಳಿ ಕವಿತಾ ಬಾಡಗಂಡಿ ಮಂಜುಳಾ ಕುಲಕರ್ಣಿ ಲೀಲಾ ಜೋಶಿ ಪರಿಮಳ ಜೋಶಿ, ಸುಜಾತಾ ದೇಶಪಾಂಡೆ, ರಾಹುಲ ದೇಶಪಾಂಡೆ, ಡಾ ರಮಾಕಾಂತ ಕುಲಕರ್ಣಿ, ವಿರೇಂದ್ರ ಪದಕಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಏಕ ವ್ಯಕ್ತಿ ನಾಟಕ "ಮಲ್ಲಿಗೆ" ಕಾರ್ಯಕ್ರಮ

ಗೋಕಾಕ: ಇನ್ನರವ್ಹೀಲ್ ಸಂಸ್ಥೆ ಗೋಕಾಕ, ರಾಹುಲ ಸೊಂಟಕ್ಕಿ ಟ್ರಸ್ಟ ಗೋಕಾಕ ಹಾಗೂ ಗುರುಮಾರ್ಗ ಪತ್ರಿಕೆ ಇವರ ಸಂಯುಕ್ತ ಆಶ್ರಯದಲ್ಲಿ ರಾಜ್ಯ ಮತ್ತು ರಾಷ್ಟ್ರ ಪ್ರಶಸ್ತಿ ಸೇರಿದಂತೆ ಇನ್ನು ಅನೇಕ ಪ್ರಶಸ್ತಿ ಪುರಸ್ಕೃತ ಚಲನಚಿತ್ರ ನಟಿ ಅಕ್ಷತಾ ಪಾಂಡವಪುರ ಕಥಾಭಿನಯ ಏಕ ವ್ಯಕ್ತಿ ನಾಟಕ "ಮಲ್ಲಿಗೆ" ಕಾರ್ಯಕ್ರಮ ಇದೆ ದಿ.11 ರಂದು ಸಂಜೆ 5ಗಂಟೆಗೆ ಕೆಎಲ್ಇ ಶಾಲೆಯ ಆವರಣದಲ್ಲಿ ಜರುಗಲಿದೆ.

ಹೆಣ್ಣಿನ ಸಮಸ್ಯೆ, ಅಸಹಾಯಕತೆ, ಯಾತನೆಗಳನ್ನು ಪ್ರಧಾನವಾಗಿಟ್ಟುಕೊಂಡು ಸುಮಾರು ಒಂದೂವರೆ ಗಂಟೆಗಳಕಾಲ ವಿವಿಧ ಪಾತ್ರಧಾರಣಿಯಾಗಿ ಅಕ್ಷತಾ ಪಾಂಡವಪೂರ ಅಭಿನಯಿಸಲಿದ್ದಾರೆ. ಈ ರಂಗಸ್ವಾದ ಸವಿಯಲು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಗುರುಮಾರ್ಗ ಪತ್ರಿಕೆ ಸಂಪಾದಕ ವಿರೇಂದ್ರ ಪತಕಿ ಅವರು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

ಪ್ರವೇಶ ಪತ್ರಗಳಿಗಾಗಿ ಆರತಿ ನಾಡಗೌಡ 9481743992, ಸೀತಾ ಬೆಳಗಾವಿ 9449240189, ವಿರೇಂದ್ರ ಪತಕಿ 8762189247, ಲಕ್ಷ್ಮಣ ಸೊಂಟಕ್ಕಿ 9449949692 ಚೇತನ ಜೋಗನ್ನವರ 8792692838 ಸಂಪರ್ಕಿಸಲು ಕೋರಲಾಗಿದೆ.

ಪ್ರತಿಭಾ ಪುರಸ್ಕಾರ, ವಿಪ್ರ ಸಾಧಕರಿಗೆ ಸನ್ಮಾನ

ಬೆಳಗಾವಿ: ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯಿಂದ ವಿಶ್ವಾಮಿತ್ರ ಪ್ರತಿಭಾ ಪುರಸ್ಕಾರ ಹಾಗೂ ವಿಪ್ರ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಫೆ.12ರಂದು ಬೆಳಗಾವಿಯಲ್ಲಿ ನಡೆಯಲಿದೆ.

ಅಂದು ಸಂಜೆ 4 ಗಂಟೆಗೆ ಭಾಗ್ಯನಗರದ 2ನೇ ಕ್ರಾಸ್ ನ ಸಿಟಿ ಹಾಲ್ ನಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ.

ಧಾರವಾಡ, ಚಿಕ್ಕೋಡಿ, ಬೆಳಗಾವಿ, ಗದಗ, ಹಾವೇರಿ ಜಿಲ್ಲೆಗಳಲ್ಲಿ ಕಳೆದ ಸಾಲಿನ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಮೊದಲ ಮೂರು ಸ್ಥಾನಗಳನ್ನು ಪಡೆದ ವಿಪ್ರ ವಿದ್ಯಾರ್ಥಿಗಳಿಗೆ ಪುರಸ್ಕಾರ ನೀಡಲಾಗುವುದು. ಜೊತೆಗೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಬ್ರಾಹ್ಮಣ ಸಮಾಜದ ಸಾಧಕರನ್ನು ಸನ್ಮಾನ ಮಾಡಲಾಗುವುದು.

ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಎಚ್. ಎಸ್. ಸಚ್ಚಿದಾನಂದಮೂರ್ತಿ ಕಾರ್ಯಕ್ರಮ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಸಂಸದೆ ಮಂಗಲ ಅಂಗಡಿ, ಬೆಳಗಾವಿ ದಕ್ಷಿಣ ಕ್ಷೇತ್ರದ ಶಾಸಕ ಅಭಯ ಪಾಟೀಲ ಭಾಗವಹಿಸುವರು. ಬೆಳಗಾವಿ ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಎಸ್.ಎಂ.ಕುಲಕರ್ಣಿ ಅಧ್ಯಕ್ಷತೆ ವಹಿಸಲಿದ್ದಾರೆ.

ಮತದಾರರ ಅಂತಿಮ ಪಟ್ಟಿ ಪ್ರಕಟ

ಅಥಣಿ : ಅಥಣಿ ವಿಧಾನಸಭಾ ಕ್ಷೇತ್ರದ ಮತದಾರರ ಅಂತಿಮ ಪಟ್ಟಿಯನ್ನು ಜ .5 ರಂದು ಗ್ರಾಮ ಆಡಳಿತ ಅಧಿಕಾರಿಗಳ ಕಾರ್ಯಾಲಯ ಹಾಗೂ ಗ್ರಾಮ ಮತಗಟ್ಟೆ ಅಧಿಕಾರಿ (ಬಿಎಲ್ಒ) ಗ್ರಾಮ ಮತಗಟ್ಟೆ ಹಾಗೂ ಕಚೇರಿಯಲ್ಲಿ ಪ್ರಕಟಿಸಲಾಗಿದೆ.

ಸಾರ್ವಜನಿಕರು ತಮ್ಮ ಪಟ್ಟಣ, ಗ್ರಾಮದ ಆಡಳಿತ ಕಚೇರಿ (ಗ್ರಾಮ ಲೆಕ್ಕಾಧಿಕಾರಿ) ಹಾಗೂ ಬಿಎಲ್ಒ ಬಳಿ ಇರುವ ಮತದಾರರ ಪಟ್ಟಿಯಲ್ಲಿ ತಮ್ಮ ಖಚಿತಪಡಿಸಿಕೊಳ್ಳಲು ತಹಸೀಲ್ದಾರ್ ಪ್ರಕಟಣೆ ತಿಳಿಸಿದೆ.

ಒಂದು ವೇಳೆ ಹೆಸರು ಮತದಾರರ ಪಟ್ಟಿಯಲ್ಲಿ ಇಲ್ಲದಿದ್ದರೆ ತಮ್ಮ ವ್ಯಾಪ್ತಿಯ ಗ್ರಾಮ ಲೆಕ್ಕಾಧಿಕಾರಿ ಅಥವಾ ಬಿಎಲ್ಒ ಅವರನ್ನು ಸಂಪರ್ಕಿಸಿ ಗರುಡ ಆ್ಯಪ್, ವೋಟರ್ ಹೆಲ್ಪ್‌ಲೈನ್ ಆ್ಯಪ್, ಎನ್ಒಎಸ್‌ಪಿ ಆ್ಯಪ್ ನಲ್ಲಿ ತಮ್ಮ ಹೆಸರುಗಳನ್ನು ನಮೂನೆ –6 ರಲ್ಲಿ ಸಲ್ಲಿಸುವ ಮೂಲಕ ನೋಂದಾಯಿಸಿಕೊಳ್ಳಬಹುದಾಗಿದೆ ತಿಳಿಸಲಾಗಿದೆ.

ಜಾತ್ರಾಮಹೋತ್ಸವದಲ್ಲಿ ಪಾಲ್ಗೊಂಡ ಶಾಸಕಿ ಲಕ್ಷ್ಮೀ ಹೆಬ್ಬಾಳಕರ

ಬೆಳಗಾವಿ: ಗ್ರಾಮೀಣ ಕ್ಷೇತ್ರದ ಕರಿಕಟ್ಟಿ ಗ್ರಾಮದ ಶ್ರೀ ಲಕ್ಷ್ಮಿ ದೇವಿ ಜಾತ್ರಾ ಮಹೋತ್ಸವದಲ್ಲಿ ಶಾಸಕಿ ಲಕ್ಷ್ಮೀ ಹೆಬ್ಬಾಳಕರ ಪಾಲ್ಗೊಂಡು, ದೇವಿಯ ದರ್ಶನ ಆಶೀರ್ವಾದ ಪಡೆದರು.

ಈ ವೇಳೆ ಅವರು ನಾಡಿನ ಒಳಿತಿಗಾಗಿ ಪ್ರಾರ್ಥಿಸಿ ಸಕಲರಿಗೂ ಸಮೃದ್ಧಿಗಾಗಿ ಕೋರಿದರು.

ಶೇಖರ ಹೊಸೂರಿ, ಮಂಜು ತೋಟಗಿ, ವಿಲ್ಸನ್ ಮಹಾರ, ಲಗಮಣ್ಣ ಸಿದ್ದನಹಳ್ಳಿ, ಮಹಾದೇವ ಬುಡ್ರಿ, ಬಸಪ್ಪ ಧರನಟ್ಟಿ, ದುರ್ಗಪ್ಪ ದಾಸನಟ್ಟಿ, ಯಲ್ಲಪ್ಪ ಕರಡಿಗುದ್ದಿ, ಸಂತೋಷ ಬೋರಿಮರದ, ಶೇಖರ ಶಿಣಗಿ, ಬಾಳಪ್ಪ ಶಿಣಗಿ, ಲಗಮಪ್ಪ ಕರಡಿಗುದ್ದಿ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಹಾಸನ ಕ್ಷೇತ್ರಕ್ಕೆ ಭವಾನಿ ರೇವಣ್ಣ ಅನಿವಾರ್ಯವಲ್ಲ: ಹೆಚ್‌ಡಿಕೆ

ಬೆಳಗಾವಿ: ಹಾಸನ ಟಿಕೆಟ್ ವಿಚಾರದಲ್ಲಿ ಯಾವುದೇ ಗೊಂದಲ ಇಲ್ಲ. ಮುಖ್ಯವಾಗಿ ಭವಾನಿ ರೇವಣ್ಣ ಅವರು ಈ ಚುನಾವಣೆಯಲ್ಲಿ ಅನಿವಾರ್ಯ ಅಲ್ಲ ಎಂದು ಮಾಜಿ ಮುಖ್ಯಮಂತ್ರಿ ಹೆಚ್. ಡಿ.ಕುಮಾರಸ್ವಾಮಿ ಮತ್ತೊಮ್ಮೆ ಸ್ಪಷ್ಟಪಡಿಸಿದರು.

ಬೆಳಗಾವಿಯಲ್ಲಿ ಶುಕ್ರವಾರ ಸುದ್ದಿಗಾರರ ಜೊತೆಗೆ ಮಾತನಾಡಿದ ಅವರು ಹಾಸನ ಮತ್ತು ಹೊಳೆನರಸಿಪುರ ಟಿಕೆಟ್ ವಿಚಾರದಲ್ಲಿ ಯಾವುದೇ ಗೊಂದಲ ನಮ್ಮಲ್ಲಿ ಇಲ್ಲ ಎಂದು ಹೇಳಿದರು. ಹಾಸನ ಟಿಕೆಟ್ ವಿಚಾರ ಇನ್ನೊಂದು ವಾರದಲ್ಲಿ ಬಗೆಹರಿಯಲಿದೆ. ಚುನಾವಣೆ ಗೆಲ್ಲಬೇಕಾದ ಹಿನ್ನಲೆಯಲ್ಲಿ ನಾವು ಸೂಕ್ತ ತೀರ್ಮಾನ ಕೈಗೊಳ್ಳುತ್ತೇವೆ ಎಂದರು.

ನಮಗೆ 30 ರಿಂದ 40 ಕ್ಷೇತ್ರಗಳಲ್ಲಿ ಅಭ್ಯರ್ಥಿಗಳ ಕೊರತೆ ಇದೆ. ಈ ಕೊರತೆ ತುಂಬಿಕೊಳ್ಳಲು ಜನರ ವಿಶ್ವಾಸ ಪಡೆದುಕೊಳ್ಳುವ ಹೊಸ ಮುಖಗಳಿದ್ದರೂ ಸರಿ ಅವರಿಗೆ ನಾವು ಬೆಂಬಲ ಕೊಡುತ್ತೇವೆ ಎಂದರು.

ರಮೇಶ ಜಾರಕಿಹೊಳಿ ಅವರ ಸಿ ಡಿ ಪ್ರಕರಣದ ಬಗ್ಗೆ ಪ್ರಸ್ತಾಪಿಸಿ, ಇಂತಹ ಸಿ ಡಿ ತಯಾರಿಕೆ ಅದರ ಕಾರ್ಖಾನೆಯ ಬಗ್ಗೆ ಮಾತನಾಡುವಷ್ಟು ಸಮಯ ನನಗೆ ಇಲ್ಲ. ಮೇಲಾಗಿ ಸಿಡಿ ಗಳ ಬಗ್ಗೆ ನನಗೆ ನಂಬಿಕೆ ಇಲ್ಲ. ಇದನ್ನು ಇಟ್ಟುಕೊಂಡು ಚುನಾವಣೆ ಎದುರಿಸಲು ಸಾಧ್ಯವೇ?. ಜನರ ಮುಂದೆ ಇದನ್ನು ಪ್ರಸ್ತಾಪ ಮಾಡಿ ಮತಗಳಿಸಲು ಆಗುತ್ತದೆಯೇ?. ಹೀಗಿರುವಾಗ ಅದನ್ನು ಬಿಟ್ಟು ಜನರ ಸಮಸ್ಯೆಗಳ ಕಡೆ ಗಮನಹರಿಸಿದರೆ ಒಳ್ಳೆಯದು ಎಂದರು.

ಸವದತ್ತಿ ಯಲ್ಲಮ್ಮ ದರ್ಶನಕ್ಕೆ ಬಸ್ ಇಲ್ಲದಿದ್ದಕ್ಕೆ ಭಕ್ತರ ಪರದಾಟ

ಗದಗ: ಪ್ರಸಿದ್ದ ಬೆಳಗಾವಿ ಜಿಲ್ಲೆಯ ಸವದತ್ತಿ ರೇಣುಕಾ ಯಲ್ಲಮ್ಮ ದೇವಸ್ಥಾನಕ್ಕೆ ಬೆಳಗ್ಗೆಯಿಂದ ಅಪಾರ ಸಂಖ್ಯೆಯಲ್ಲಿ ಭಕ್ತರು ಆಗಮಿಸುತ್ತಿದ್ದಾರೆ.

ಮಲಪ್ರಭೆಯ ತಟ ಗುಡ್ಡದ ಮೇಲೆ ನೆಲಿಸಿರುವ ದೇವಿಯ ದರ್ಶನ ಪಡೆದುಕೊಳ್ಳಲು ರಾಜ್ಯ–ಅಂತರ್ ರಾಜ್ಯದಿಂದ ಜನರು ಬರುತ್ತಿದ್ದಾರೆ. ಆದರೆ ಗದಗ ಜಿಲ್ಲೆಯ ಜನ ಮಾತ್ರ ಯಲ್ಲಮ್ಮನ ದೇವಸ್ಥಾನಕ್ಕೆ ಹೋಗಲು ಪರದಾಡುತ್ತಿದ್ದಾರೆ. ಗದಗ ನಗರದ ಹೊಸ ಬಸ್ ನಿಲ್ದಾಣದಿಂದ ಸವದತ್ತಿಗೆ ಹೋಗಲು ಬಸ್ ಇಲ್ಲದೆ ಭಕ್ತರು ಪರದಾಡುತ್ತಿದ್ದಾರೆ.

ಈ ಬಗ್ಗೆ ಸಾರಿಗೆ ಅಧಿಕಾರಿಗಳಿಗೆ ಕೇಳಿದರೆ ಉಢಾಪೆ ಉತ್ತರ ನೀಡುತ್ತಿದ್ದಾರೆ. ಇದರಿಂದ ಭಕ್ತರು ಸಾರಿಗೆ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಲಕ್ಕುಂಡಿ ಉತ್ಸವಕ್ಕೆ ವಾಹನ ಬಿಟ್ಟಿದ್ದೇವೆ ಸವದತ್ತಿಗೆ ಬಸ್ ಬಿಡಲಿಕ್ಕಾಗಲ್ಲ ಅಂತಿದ್ದಾರೆ. ಹೀಗಾಗಿ ಸವದತ್ತಿ ಯಲ್ಲಮ್ಮನ ದರ್ಶನಕ್ಕೆ ಹೋಗುವ ಭಕ್ತರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಮಹಿಳೆಯರು, ಮಕ್ಕಳು ಸೇರಿ ನೂರಾರು ಭಕ್ತರು ಪರದಾಡುತ್ತಿದ್ದು, ಅಧಿಕಾರಿಗಳು ಬಸ್ ವ್ಯವಸ್ಥೆ ಮಾಡಬೇಕು ಅಂತ ಭಕ್ತರು ಒತ್ತಾಯಿಸಿದ್ದಾರೆ.

ಯಲ್ಲಮ್ಮ ದೇವಸ್ಥಾನ: ಮಹೇಶ ನೂತನ ಇಒ



ಉಗರಗೋಳ: ಯಲ್ಲಮ್ಮನಗುಡ್ಡದ ಯಲ್ಲಮ್ಮ ದೇವಿ ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಎಸ್‌ಪಿಬಿ ಮಹೇಶ ಶುಕ್ರವಾರ ಅಧಿಕಾರ ಸ್ವೀಕರಿಸಿದರು.

ಕೊಲ್ಲೂರ ಮೂಕಾಂಬಿಕೆ ದೇವಸ್ಥಾನದಿಂದ ವರ್ಗಾವಣೆಯಾಗಿ ಬಂದ ಮಹೇಶ ಅವರಿಗೆ, ಈ ಹಿಂದೆ ಕಾರ್ಯನಿರ್ವಾಹಕ ಅಧಿಕಾರಿಯಾಗಿದ್ದ ಬಸವರಾಜ ಜೀರಗ್ಯಾಳ ಅಧಿಕಾರ ಹಸ್ತಾಂತರಿಸಿದರು.

ನಂತರ ಮಾತನಾಡಿದ ಮಹೇಶ, ಯಲ್ಲಮ್ಮನಗುಡ್ಡದ ಪರಿಸರದಲ್ಲಿ ಶುಚಿತ್ವಕ್ಕೆ ಒತ್ತು ನೀಡಲಾಗುವುದು. ಭಕ್ತರಿಗೆ ಅಗತ್ಯ ಮೂಲಸೌಕರ್ಯ ಒದಗಿಸಲಾಗುವುದು. ಸರತಿ ಸಾಲಿನಲ್ಲಿ ನಿಂತು ಯಲ್ಲಮ್ಮ ದೇವಿ ದರ್ಶನ ಪಡೆಯಲು ಪೂರಕವಾಗಿ ಕ್ಯೂಲೈನ್ ವ್ಯವಸ್ಥೆ ಅಭಿವೃದ್ಧಿಪಡಿಸಲಾಗುವುದು. ಅಭಿವೃದ್ಧಿ ಕೆಲಸಗಳನ್ನು ಚುರುಕುಗೊಳಿಸಲಾಗುವುದು ಎಂದರು. ಇದಕ್ಕೂ ಮುಂಚೆ, ಯಲ್ಲಮ್ಮ ದೇವಿಗೆ ವಿಶೇಷ ಪೂಜೆ ಸಲ್ಲಿಸಿದರು.

ದೇವಸ್ಥಾನ ಅಧೀಕ್ಷಕ ಅರವಿಂದ ಮಳಗೆ, ಅಲ್ಲಮಪ್ರಭು ಪ್ರಭುನವರ, ರಾಜು ಬೆಳವಡಿ, ಎಂ.ಎನ್.ಕಗದಾಳ, ಗೋವಿಂದರಾವ್ ಕುಲಕರ್ಣಿ, ಸದಾನಂದ ಈಟಿ, ಭೀಮಣ್ಣ ಬಾರ್ಕಿ, ಮಂಜು ಪವಾರ, ಅರ್ಚಕರಾದ ಗಣಪತಿಗೌಡ ಚನ್ನಪ್ಪಗೌಡ್ರ, ನಿಂಗನಗೌಡ ಸಾವಕ್ಕನವರ ಇತರರಿದ್ದರು.

ರಾಮಲಿಂಗೇಶ್ವರ ಗುಡ್ಡದಲ್ಲಿ ಶಿವರಾತ್ರಿ ಕಾರ್ಯಕ್ರಮಗಳು

ಬೂದಿಹಾಳ: ಗ್ರಾಮದಲ್ಲಿ ಶಿವರಾತ್ರಿಯ ಪ್ರಯುಕ್ತ ರಾಮಲಿಂಗೇಶ್ವರ ಗುಡ್ಡದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಬರುವ ಮಂಗಳವಾರ 14 ರಿಂದ 20ರ ವರೆಗೆ ರುದ್ರಾಭಿಷೇಕ, ಅಖಂಡ ಜಪ ಯಜ್ಞ, ಪ್ರವಚನ ಕಾರ್ಯಕ್ರಮಗಳು ಸೇರಿದಂತೆ ಭಜನಾ ಕಾರ್ಯಕ್ರಮಗಳು ಜರುಗುತ್ತವೆ ಎಂದು ರಾಮಲಿಂಗೇಶ್ವರ ಮಠದ ಪೀಠಾಧಿಪತಿಗಳಾದ ಶ್ರೀ ಸದ್ಗುರು ಸಚ್ಚಿದಾನಂದ ಮಹಾಸ್ವಾಮಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೂದಿಹಾಳ ಗ್ರಾಮದಿಂದ ಎರಡು ಕಿಲೋಮೀಟರ್ ಅಂತರದಲ್ಲಿರುವ ಈ ಮಠ ತನ್ನದೇ ಆದ ವಿಶೇಷತೆಯನ್ನು ಹೊಂದಿದೆ ಬೂದಿಹಾಳ ಗ್ರಾಮದ ಹತ್ತಿರವಿರುವ ಬೃಹತ್ ಗುಡ್ಡದಲ್ಲಿ ಪ್ರತಿಷ್ಠಾಪನೆಯಾದ ರಾಮಲಿಂಗೇಶ್ವರ ಸ್ವಾಮಿ ಮಠದಲ್ಲಿ ಕಾರ್ಯಕ್ರಮಗಳು ನಿತ್ಯ ನಿರಂತರ ಜರಗುತ್ತವೆ.

ಪ್ರಶಾಂತವಾದ ವಾತಾವರಣದಲ್ಲಿ ನಿರ್ಮಿತವಾದ ಮಠಕ್ಕೆ ವಿಶಿಷ್ಟ ಶಕ್ತಿ ಇದೆ ಎಂದು ತಿಳಿಸಿದರು ಶಿವರಾತ್ರಿಯ ಕಾರ್ಯಕ್ರಮವನ್ನು ಯಶಸ್ವಿಯಾಗಿಸಲು ಭಕ್ತರಲ್ಲಿ ಸ್ವಾಮೀಜಿಗಳು ಮನವಿ ಮಾಡಿಕೊಂಡರು ಈ ಸಂದರ್ಭದಲ್ಲಿ ಪ್ರಗತಿಪರ ರೈತ ಕಲ್ಲಪ್ಪ ಹಾರೂಗೇರಿ, ನ್ಯಾಯವಾದಿ ಬಿ ಎನ್ ಬಂಡಗಾರ್, ಮಹೇಶ್ ತವಸಿ ಇದ್ದರು.

ಅನಧಿಕೃತ ಹೊಟೇಲ್‌ಗಳ ತೆರವಿಗೆ ಮುಂದಾದ ಅಧಿಕಾರಿಗಳು

ಗಂಗಾವತಿ: ತಾಲೂಕಿನ ಸಾಣಾಪೂರ, ಆನೆಗೊಂದಿ, ಹನುಮನಹಳ್ಳಿ ಭಾಗದಲ್ಲಿದ್ದ ಅನಧಿಕೃತ ಹೊಟೇಲ್‌ಗಳ ತೆರವಿ ಕಾರ್ಯಕ್ಕೆ ಹಂಪಿ ಅಭಿವೃದ್ಧಿ ಪ್ರಾಧಿಕಾರ ಹಾಗೂ ಜಿಲ್ಲಾಡಳಿತ ಅಧಿಕಾರಿಗಳು ಮುಂದಾಗಿದ್ದು ಗುರುವಾರ ಬೆಳ್ಳಿಗ್ಗೆ ಅಂಜನಾದ್ರಿ ಬೆಟ್ಟದ ಕಚೇರಿಯಲ್ಲಿ ಸಭೆ ನಡೆಸಿ ಮೂರು ತಂಡಗಳಲ್ಲಿ ಕಾರ್ಯಾಚರಣೆಗಿಳಿದಿದ್ದಾರೆ. ಹೊಟೇಲ್‌ಗಳ ವಿದ್ಯುತ್ ಹಾಗೂ ಕುಡಿಯುವ ನೀರಿನ ಸಂಪರ್ಕವನ್ನು ಜೆಸ್ಕಾಂ ಹಾಗೂ ಸಾಣಾಪೂರ ಮತ್ತು ಆನೆಗೊಂದಿ ಗ್ರಾ.ಪಂ. ಗಳ ಮೂಲಕ ಕಡಿತಗೊಳಿಸಲಾಗಿದೆ. ಕೂಡಲೇ ಸ್ವಯಂ ಪ್ರೇರಣೆಯಿಂದ ಎರಡು ದಿನಗಳಲ್ಲಿ ಅನಧಿಕೃತ ಹೊಟೇಲ್‌ಗಳಲ್ಲಿರುವ ದೇಶ ವಿದೇಶದ ಪ್ರವಾಸಿಗರನ್ನು ವಾಪಸ್ ಹಣ ಕೊಟ್ಟು ಕಳಿಸಿ ಕಟ್ಟಡ, ಗುಡಿಸಲುಗಳನ್ನು ತೆರವು ಮಾಡಿಕೊಳ್ಳುವಂತೆ ಅಧಿಕಾರಿಗಳು ಸೂಚನೆ ನೀಡಿದ್ದಾರೆ.

ವಿರೂಪಾಪೂರ ಗಡ್ಡಿಯಲ್ಲಿದ್ದ ರೆಸಾರ್ಟ್‌ಗಳನ್ನು ಸ್ಮಾರಕ ಸಂರಕ್ಷಣೆಗಾಗಿ ಸುಪ್ರೀಂಕೋರ್ಟ್ ನಿರ್ದೇಶನದಂತೆ 2018ರಲ್ಲಿ ತೆರವುಗೊಳಿಸಿದ ನಂತರ ಸಾಣಾಪೂರ, ಆನೆಗೊಂದಿ, ಹನುಮನಹಳ್ಳಿ , ಅಂಜಿನಳ್ಳಿ, ಜಂಗ್ಲಿ, ಕಡೆಬಾಗಿಲು ಗ್ರಾಮಗಳಲ್ಲಿ ಅನಧಿಕೃತವಾಗಿ ರೈತರ ಹೊಲ–ಗದ್ದೆಗಳಲ್ಲಿ ಕೆಲವಡೆ ರೈತರು ಇನ್ನೂ ಕೆಲವೆಡೆ ಭೂಮಿ ಲೀಜ್ ಪಡೆದು ಹೊಟೇಲ್‌ಗಳನ್ನು ಆರಂಭಿಸಲಾಗಿತ್ತು.

ಇದನ್ನು ಖಂಡಿಸಿ ಕೆಲ ಕರವೇ ಸಂಘಟನೆಗಳು ಸೇರಿ ಸಂಘ ಸಂಸ್ಥೆಯವರು ಜಿಲ್ಲಾಡಳಿತದ ವಿರುದ್ಧ ಪ್ರತಿಭಟನೆ ನಡೆಸಿ ಕೂಡಲೇ ಅನಧಿಕೃತ ಹೊಟೇಲ್‌ಗಳನ್ನು ಬಂದ್ ಮಾಡಿಸುವಂತೆ ಆಗ್ರಹಿಸಿದ್ದವು.

60ಕ್ಕೂ ಹೆಚ್ಚು ರೆಸಾರ್ಟ್‌ಗಳ ಮೇಲೆ ದಾಳಿ

ಕೊಪ್ಪಳ: ಗಂಗಾವತಿ ತಾಲೂಕಿನಾದ್ಯಂತ ಅನಧಿಕೃತವಾಗಿ ತಲೆಯೆತ್ತಿದ್ದ ಸುಮಾರು 60ಕ್ಕೂ ಹೆಚ್ಚು ರೆಸಾರ್ಟ್ಗಳಿಗೆ ಹಂಪಿ ಪ್ರಾಧಿಕಾರ ಆಯುಕ್ತರು ದಾಳಿ ಮಾಡಿ ಬೀಗ ಜಡಿದಿದ್ದಾರೆ. ಹಂಪಿ ಪ್ರಾಧಿಕಾರ ಆಯುಕ್ತ ಸಿದ್ದರಾಮೇಶ್ವರ, ಕೊಪ್ಪಳ ಎಸಿ ಬಸವಣ್ಣೆಪ್ಪ ನೇತೃತ್ವದ ತಂಡ ರೇಡ್ ಮಾಡಿದೆ.

ಗಂಗಾವತಿ ತಾಲೂಕಿನ ಆನೆಗೊಂದಿ, ಸಾಣಾಪುರ, ಜಂಗ್ಲಿ, ರಾಂಪೂರ, ಹನುಮಹಳ್ಳಿ ಸೇರಿದಂತೆ ಸುತ್ತುಮುತ್ತ ಗ್ರಾಮದಲ್ಲಿ ರೆಸಾರ್ಟ್ಗಳು ಅನಧಿಕೃತವಾಗಿ ನಿರ್ಮಾಣವಾಗಿದ್ದವು.

ಸರ್ಕಾರದ ಅನುಮತಿ ಇಲ್ಲದೇ ವಿದ್ಯುತ್, ನೀರಿನ ಸಂಪರ್ಕವನ್ನು ಮಾಡಿಕೊಂಡಿದ್ದರು. ಹೀಗಾಗಿ ಹಂಪಿ ಪ್ರಾಧ

ತಂಬಾಕು ಮುಕ್ತ ಯುವಪೀಳಿಗೆ-2025 ಅನುಷ್ಠಾನ ಕಾರ್ಯಾಗಾರ

ಬೆಳಗಾವಿ: ಪ್ರತಿ ವರ್ಷ 13 ಲಕ್ಷ ಜನರು ತಂಬಾಕು ಉತ್ಪನ್ನಗಳ ಬಳಕೆಯಿಂದಾಗಿ ಸಾವನ್ನಪುತ್ತಾರೆ. ತಂಬಾಕು ಉದ್ಯಮವು ಮಕ್ಕಳು ಮತ್ತು ಯುವಪೀಳಿಗೆಯನ್ನು ಗುರಿಯಾಗಿಸಿಕೊಂಡಿದೆ.

ಮಕ್ಕಳು ಮತ್ತು ಯುವ ಪೀಳಿಗೆಯು ತಂಬಾಕು ಉತ್ಪನ್ನಗಳನ್ನು ಬಳಸಲು ಅಥವಾ ಆಕರ್ಷಿತರಾಗಲು ತಂಬಾಕು ಉದ್ಯಮವು ವಿವಿಧ ವಿನ್ಯಾಸ, ಉತ್ತಮ ಪ್ರಚಾರ ಮತ್ತು ಜಾಹಿರಾತುಗಳ ಮೂಲಕ ತಂಬಾಕು ಉತ್ಪನ್ನಗಳಿಗೆ ಆಕರ್ಷಿತರಾಗುವಂತೆ ಮಾಡುತ್ತಿದೆ.

ವಿಶ್ವ ಆರೋಗ್ಯ ಸಂಸ್ಥೆ ನಡೆಸಿರುವ ಗ್ಲೋಬಲ್ ಅಡಲ್ಟ್ ಟೋಬ್ಯಾಕೋ ಸರ್ವೇ 2016-17 ರಂತೆ, ರಾಜ್ಯದಲ್ಲಿ ತಂಬಾಕು ಉತ್ಪನ್ನಗಳ ಸೇವನೆ ಮಾಡುವವರ ಸಂಖ್ಯೆ 22.8 %, (ಸುಮಾರು 3 ಕೋಟಿ ಜನಸಂಖ್ಯೆ) ಅದರಲ್ಲಿ 8.8% ಧೂಮಪಾನಿಗಳು ಮತ್ತು 16.3 % ಜಗಿಯುವ ತಂಬಾಕು ಉತ್ಪನ್ನಗಳ ಸೇವನೆ ಮಾಡುವವರಾಗಿದ್ದಾರೆ ಹಾಗೂ 23.9% ರಷ್ಟು

ಜನ ಸಾರ್ವಜನಿಕ ಸ್ಥಳಗಳಲ್ಲಿ ಪರೋಕ್ಷವಾಗಿ ಧೂಮಪಾನಕ್ಕೆ ಒಳಗಾಗುತ್ತಿದಾರೆ ಎಂದು ವರದಿಯಲ್ಲಿ ತಿಳಿಸಿರುತ್ತದೆ.

ಇನ್ನೊಂದು ಆಘಾತಕಾರಿ ವಿಷಯವೆನೆಂದರೆ, ರಾಜ್ಯದಲ್ಲಿ ಸುಮಾರು 19 ವರ್ಷಕ್ಕೆ ಯುವಕ/ಯುವತಿಯತಿಯರು ತಂಬಾಕು ಉತ್ಪನ್ನಗಳ ಸೇವೆನೆಯನ್ನು ಪ್ರಾರಂಭಿಸುತ್ತಿದ್ದಾರೆ ಎಂದು ವರದಿಯಲ್ಲಿ ಉಲ್ಲೇಖಿಸಿರುತ್ತಾರೆ ಎಂದು ಡಾ.ಬಿ.ಎನ್ ತುಕ್ಕಾರ ಜಿಲ್ಲಾ ಸರ್ವೆಕ್ಷಣಾಧಿಕಾರಿಗಳು/ ತಂಬಾಕು ನಿಯಂತ್ರಣಾಧಿಕಾರಿಗಳು ಬೆಳಗಾವಿ ಇವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಹಿನ್ನೆಲೆಯಲ್ಲಿ, "ತಂಬಾಕು ಮುಕ್ತ ಯುವಪೀಳಿಗೆ -2025 ಅನುಷ್ಠಾನದಲ್ಲಿ ವಿವಿಧ ಇಲಾಖೆಗಳ ಪಾತ್ರ" ದ ಕುರಿತು ಬೆಳಗಾವಿ ಪ್ರಾದೇಶಿಕ ಅಧಿಕಾರಿಗಳಿಗೆ ಒಂದು ದಿನದ ಕಾರ್ಯಾಗಾರವನ್ನು ಫೆ. 9, 2023 ರಂದು ಸುವರ್ಣ ಸೌಧದಲ್ಲಿ ಸಭಾಂಗಣದಲ್ಲಿ ಹಮ್ಮಿಕೋಳ್ಳಲಾಯಿತು.

ಕಾರ್ಯಕ್ರಮದಲ್ಲಿ ಹಾಜರಿದ್ದ ಅತಿಥಿಗಳನ್ನು ಹಾಗೂ ಭಾಗೀದಾರರನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಡಾ. ಮಹೇಶ ಕೋಣಿ ಅವರು ಎಲ್ಲ ಅಧಿಕಾರಿಗಳನ್ನು ಸ್ವಾಗತಿಸಿದರು.

ಕಾರ್ಯಕ್ರಮದ ಉಧ್ಘಾಟನೆ ಮತ್ತು ಅಧ್ಯಕ್ಷತೆಯನ್ನು ಪ್ರಾದೇಶಿಕ ಆಯುಕ್ತರಾದ ಎಮ್.ಜಿ ಹೀರೆಮಠ ಅವರು ವಹಿಸಿದ್ದು, ಯುವ ಪೀಳಿಗೆಯನ್ನು ತಂಬಾಕು ಸೇವನೆಯಿಂದ ಕಾಪಾಡುವುದು ಸರಕಾರದ ಆದ್ಯ ಕರ್ತವ್ಯವಾಗಿದ್ದು ಈ ನಿಟ್ಟಿನಲ್ಲಿ ವಿವಿಧ ಇಲಾಖೆಗಳ ಪಾತ್ರ ಬಹು ಮುಖ್ಯವಾಗಿರುತ್ತದೆ.

ಈಗಾಗಲೇ ರಾಜ್ಯದಲ್ಲಿ 3 ಕೋಟಿ ಜನರು ತಂಬಾಕು ವ್ಯಸನಿಗಳಾಗಿದ್ದು ಇವರನ್ನು ತಂಬಾಕು ಮುಕ್ತಗೊಳಿಸಿದ್ದು ಬಹಳ ಕಷ್ಟ ಸಾಧ್ಯ.

ತಂಬಾಕು ಕಂಪನಿಗಳು ಯುವಕರನ್ನು ಗುರಿಯಾಗಿಸಿ ಜಾಹಿರಾತುಗಳನ್ನು ಮಾಡುತ್ತಿದ್ದು ಯುವಕರು ಇಂಥಹ ಜಾಹಿರಾತಿಗೆ ಮರುಳಾಗಿ ಶಾಲಾ/ಕಾಲೇಜು, ಸಂಧರ್ಬದಲ್ಲಿ ತಂಬಾಕು ಸೇವನೆ ಆರಂಭಿಸುತ್ತಾರೆ ಹಾಗಾಗಿ ಮುಂದಿನ ದಿನದಲ್ಲಿ ತಂಬಾಕು ಉತ್ಪನ್ನಗಳಿಗೆ ಯುವಕ-ಯುವತಿಯರು ತಂಬಾಕು ಸೇವನೆ ಮಾಡದಂತೆ ಅಗತ್ಯ ಕ್ರಮವಹಿಸುವುದು ಸೂಕ್ತ ಎಂದು ಅಭಿಪ್ರಾಯ ಪಟ್ಟರು.

ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳಾದ ಡಾ.ಸಂಜಿವ ಎಮ್. ಪಾಟೀಲ ಇವರು ಮಾತನಾಡುತ್ತಾ ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಮನುಷ್ಯನ ಆರೋಗ್ಯದ ಮೇಲೆ ಆಗುವ ದುಷ್ಪರಿಣಾಮ ಮತ್ತು ಸಿಗರೇಟ ಸೇವನೆಯಿಂದ ನಮ್ಮ ಆರೋಗ್ಯ ಹಾಳಾಗುವುದಲ್ಲದೆ ಇನ್ನೊಬ್ಬರ ಆರೋಗ್ಯವು ಕೂಡಾ ಹಾಳಾಗುತ್ತದೆ ನಾವೆಲ್ಲರೂ ಪರೋಕ್ಷವಾಗಿ ತಂಬಾಕು ಸೇವನೆಗೆ ಒಳಗಾಗುತ್ತಿದ್ದೆವೆಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿಗಳಾದ ಕೆ. ಶಾಂತಲಾ ಬೆಳಗಾವಿ ಹಾಗೂ ಡಾ.ಪುಷ್ಪಾ ದೊಡಮನಿ ವಿಭಾಗೀಯ ಸಹ ನಿರ್ದೇಶಕರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಬೆಳಗಾವಿ ವಿಭಾಗ ಬೆಳಗಾವಿ ಇವರು ಕಾರ್ಯಾಗಾರದಲ್ಲಿ ಉಪಸ್ಥರರಿದ್ದರು.

ಬೆಳಗಾವಿ ವಿಭಾಗದ ಎಳು ಜಿಲ್ಲೆಯ ವಿವಿಧ ಇಲಾಖೆಗಳಾದ ಆರೋಗ್ಯ ಪೋಲಿಸ್ ಶಿಕ್ಷಣ, ಕಾರ್ಮಿಕ, ನಗರಾಭಿವೃದ್ಧಿ, ಮಹಿಳಾ ಮತ್ತು ಮಕ್ಕಳಕಲ್ಯಾಣ ಇಲಾಖೆ, ಸಾರಿಗೆ ಇಲಾಖೆಯ ಅಧಿಕಾರಿಗಳು ಸೇರಿದಂತೆ ಸುಮಾರು 80 ಅಧಿಕಾರಿಗಳು ಭಾಗವಹಿಸಿದ್ದರು.

ಡಾ: ಗೌತಮ್ ಎಸ್, chest and pulmonary Department KLE ಬೆಳಗಾವಿ ಇವರು ಕಾರ್ಯಾಗಾರಕ್ಕೆ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿ ಧುಮಪಾನದಿಂದ ಉಂಟಾಗಬಹುದಾದ ಶ್ವಾಸಕೋಶದ ಬಗ್ಗೆ ಪಿಪಿಟಿ ಮೂಲಕ ಉಪನ್ಯಾಸ ನೀಡಿದರು.

ಇನೊರ್ವ ಸಂಪನ್ಮೂಲ ವ್ಯಕ್ತಿಗಳಾದ ಶ್ರೀ ಪ್ರಭಾಕರ, ರಾಜ್ಯ ಕಾರ್ಯಕ್ರಮ ವ್ಯವಸ್ಥಾಪಕರು,ರಾಜ್ಯ ತಂಬಾಕು ನಿಯಂತ್ರಣ ಕೋಶ ಬೆಂಗಳೂರು ಇವರು "ತಂಬಾಕು ಮುಕ್ತ ಯುವಪೀಳಿಗೆ -2025 "ಅನುಷ್ಠಾನದಲ್ಲಿ ವಿವಿಧ ಇಲಾಖೆಗಳ ಪಾತ್ರದ ಕುರಿತು" ಮಾತನಾಡಿದರು. ಕಾರ್ಯಕ್ರಮದ ನಿರೂಪಣೆಯನ್ನು ಶ್ರೀ. ಮಹಾಂತೇಶ ಬಿ. ಉಳ್ಳಾಗಡ್ಡಿ ರಾಜ್ಯ ತಂಬಾಕು ನಿಯಂಯ್ರಣ ಕೋಶ ಬೆಂಗಳೂರು ಇವರು ಕಾರ್ಯಕ್ರಮವನ್ನು ನಿರೂಪಿಸಿದರು.

ಕೊಲೆ ಆರೋಪಿಗೆ ಜೀವಾವಧಿ

ಅಥಣಿ : ಸಂಬಂಧಿಕ ವ್ಯಕ್ತಿಯನ್ನು ಕೊಲೆ ಮಾಡಿದ ಆರೋಪಿಗೆ ಚಿಕ್ಕೋಡಿ 7 ನೇ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವು ಜೀವಾವಧಿ ಶಿಕ್ಷೆ ಮತ್ತು 18 ಸಾವಿರ ರೂ . ದಂಡ ವಿಧಿಸಿ ತೀಪು ನೀಡಿದೆ. ಅಥಣಿ ತಾಲೂಕಿನ ತೇವರಟ್ಟಿ ಗ್ರಾಮದ ಆರೋಪಿ ಭೀಮಣ್ಣಾ ಭರಮು ಚಿಪ್ಪರಗಿ ಇತನಿಗೆ ನ್ಯಾಯಾಲಯವು ಜೀವಾವಧಿ ಶಿಕ್ಷೆ ನೀಡಿದೆ.

ಕಳೆದ 2007 ರಲ್ಲಿ ಅಣ್ಣಪ್ಪ ನೇಮಣ್ಣಾ ಚಿಪ್ಪರಗಿ ಕೊಲೆಯಾಗಿತ್ತು. ಬೆಂಗಳೂರಿನ ಗ್ಲಾಸ್ ಕಾರ್ಖಾನೆಯಲ್ಲಿ ಕೆಲಸ ಮಾಡುತ್ತಿದ್ದ ಅಣ್ಣಪ್ಪ ಚಿಪ್ಪರಗಿ ಕಾರ್ಖಾನೆ ಬಂದ್ ಆದ ಬಳಿಕ ಗುಜರಾತಕ್ಕೆ ಹೋಗಿ ಕೆಲಸ ನಿರ್ವಹಿಸುತ್ತಿದ್ದ. ಒಮ್ಮೆ ಊರಿಗೆ ಬಂದಾಗ ಅರೋಪಿ ಭೀಮಣ್ಣಾ ನನಗೂ ಕೆಲಸ ಕೊಡಿಸು ಅಂತ ಕೇಳಿಕೊಂಡಾಗ ಅಣ್ಣಪ್ಪ ಆರೋಪಿಯನ್ನು ಗುಜರಾತಿಗೆ ಕರೆದುಕೊಂಡು ಹೋಗಿ ಕೆಲಸ ಕೊಡಿಸಿದ್ದ.

ಆದರೆ ಬಹಳ ದಿನ ಕೆಲಸ ಮಾಡದೇ ಮರಳಿ ಊರಿಗೆ ಬಂದ ಆರೋಪಿಗೆ ಮನೆಯವರು ತಾತ್ಸಾರ ಮನೋಭಾವ ತೋರುತ್ತಿದ್ದರು. ಇದರಿಂದ ಕೋಪಗೊಂಡ ಆರೋಪಿಯು ಅಣ್ಣಪ್ಪನನ್ನು ಕೊಲೆ ಮಾಡಿರುವ ಕುರಿತು ಅಥಣಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಪ್ರಕರಣದ ವಿಚಾರಣೆ ನಡೆಸಿದ 7 ನೆ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾ ಧೀಶ ಎಸ್.ಎಲ್.ಚವ್ಹಾಣ ಅವರು ಆರೋಪಿತನಿಗೆ ಜೀವಾವಧಿ ಶಿಕ್ಷೆ ಹಾಗೂ 18 ಸಾವಿರ ರೂ . ದಂಡ ವಿಧಿಸಿ ತೀಪು ನೀಡಿದ್ದಾರೆ.

ಸರಕಾರದ ಪರವಾಗಿ ಸರಕಾರಿ ಅಭಿಯೋಜಕ ವೈ.ಬಿ.ತುಂಗಳವಾದ ಮಂಡಿಸಿದ್ದರು. ಅಥಣಿ ಸಿಪಿಐ ಶೇಖರಪ್ಪ ಎಚ್.ಅವರು ಆರೋಪಿ ಮೇಲೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು.

ಬೆಳಗಾವಿ: ಅನಾರೋಗ್ಯಕ್ಕೆ ಬೇಸತ್ತು ವ್ಯಕ್ತಿ ನೇಣಿಗೆ ಶರಣು

ಬೆಳಗಾವಿ: ವ್ಯಕ್ತಿಯೊರ್ವ ಅನಾರೋಗ್ಯಕ್ಕೆ ಬೇಸತ್ತು ಮನೆಯಲ್ಲಿ ನೇಣುಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬೆಳಗಾವಿ ಜಿಲ್ಲೆಯ ನಿಪ್ಪಾಣಿ ತಾಲೂಕಿನ ಬೋರಗಾಂವ ಪಟ್ಟಣದಲ್ಲಿ ನಡೆದಿದೆ.

ಜೀತೇಂದ್ರ ಗಿರೆಪ್ಪ ಗಜ್ರೆ (41) ಆತ್ಮಹತ್ಯೆ ಮಾಡಿಕೊಂಡ ಯುವಕ ಎಂದು ತಿಳಿದು ಬಂದಿದೆ.

ಮೃತ ಜಿತೇಂದ್ರ ಗಜ್ರೆ ಪಾರ್ಶ್ವವಾಯ ರೋಗದಿಂದ ಬಳಲುತ್ತಿದರು.

ಮಾತನಾಡಲು ಬರುತ್ತಿರಲಿಲ್ಲ. ಅನಾರೋಗ್ಯಕ್ಕೆ ಬೇಸತ್ತು ಮನೆಯಲ್ಲಿ ನೇಣುಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವುದು ತಿಳಿದು ಬಂದಿದೆ. ಈ ಕುರಿತು ಸದಲಗಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ವಿದ್ಯುತ್ ನಿಲುಗಡೆ

ಬೆಳಗಾವಿ: ದಿನಾಂಕ 12.02.2023 ರಂದು ಬೆಳಿಗ್ಗೆ 11.00 ಘಂಟೆಯಿಂದ ಸಾಯಂಕಾಲ 06.00 ಘಂಟೆಯವರೆಗೆ ಹುವಿಸಕಂನಿ ವತಿಯಿಂದ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ 110 ಕೆ.ವ್ಹಿ. ಮಚ್ಛೆ ಉಪಕೇಂದ್ರದಿಂದ ಸರಬರಾಜು ಆಗುವ ಬೆಳಗಾವಿ ತಾಲೂಕಿನ ಸಂತಿ ಬಸ್ತವಾಡ, ಕಾಳೇನಟ್ಟಿ ಹಾಗೂ ವಾಘವಾಡೆ ಗ್ರಾಮಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂಬ ವಿಷಯವನ್ನು ಸಾರ್ವಜನಿಕ ಹಿತದೃಷ್ಟಿಯಿಂದ ಪತ್ರಿಕಾ ಪ್ರಕಟಣೆ ನೀಡುವಂತೆ ಈ ಮೂಲಕ ವಿನಂತಿಸಲಾಗಿದೆ.

ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಚಾಲನೆ

ಬೆಳಗಾವಿ: ಬೆಳಗಾವಿ ಗ್ರಾಮೀಣ ಕ್ಷೇತ್ರದ ಕಂಗ್ರಾಳಿ ಕೆ ಎಚ್ ಗ್ರಾಮದ ಜ್ಯೋತಿ ನಗರ ಹಾಗೂ ರಾಮನಗರದ ರಸ್ತೆ ಹಾಗೂ ಚರಂಡಿಗಳ ನಿರ್ಮಾಣಕ್ಕಾಗಿ ಮಹಾತ್ಮ ಗಾಂಧಿ ನಗರ ವಿಕಾಸ ಯೋಜನೆಯಡಿಯಲ್ಲಿ 3.50 ಕೋಟಿ ರೂ.ಗಳನ್ನು ಬಿಡುಗಡೆ ಮಾಡಿಸಿರುವ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್, ಶುಕ್ರವಾರ ಭೂಮಿ ಪೂಜೆಯನ್ನು ಕೈಗೊಂಡು, ರಸ್ತೆ ಹಾಗೂ ಚರಂಡಿ ನಿರ್ಮಾಣದ ಕಾಮಗಾರಿಗಳಿಗೆ ಚಾಲನೆಯನ್ನು ನೀಡಿದರು.

ಕಳೆದ 5 ವರ್ಷಗಳಿಂದಲೂ ಅವಿಶ್ರಾಂತವಾಗಿ ಕ್ಷೇತ್ರದ ಅಭಿವೃದ್ಧಿಯನ್ನು ಮಾಡುತ್ತ ಬಂದಿದ್ದೇನೆ. ರಾಜ್ಯದ ಬೇರೆ ಯಾವುದೇ ಕ್ಷೇತ್ರದಲ್ಲೂ ಆಗದಷ್ಟು ಸಂಖ್ಯೆಯ ಕಾಮಗಾರಿಗಳನ್ನು ಸರಕಾರದ ಅನುದಾನ, ಲಕ್ಷ್ಮೀತಾಯಿ ಫೌಂಡೇಶನ್ ಅನುದಾನ ಹಾಗೂ ಸ್ವಂತ ನಿಧಿಯಿಂದ ಮಾಡಿದ್ದೇನೆ. ಕ್ಷೇತ್ರದ ಜನರ ಪ್ರೀತಿ, ವಿಶ್ವಾಸ, ಪ್ರೋತ್ಸಾಹದ ಕಾರಣದಿಂದಾಗಿ ಇಷ್ಟೊಂದು ದಡ್ಡ ಪ್ರಮಾಣದಲ್ಲಿ ಅಭಿವೃದ್ಧಿ ಮಾಡಲು ಅವಕಾಶವಾಗಿದೆ. ಕ್ಷೇತ್ರದ ಹೊರಗಿನ ಕೆಲವರು ಕೇವಲ ರಾಜಕೀಯ ಕಾರಣಕ್ಕಾಗಿ ಟೀಕೆಗಳನ್ನು ಮಾಡಿದರೆ ನಾನು ತಲೆಕೆಡಿಸಿಕೊಳ್ಳುವುದಿಲ್ಲ.

ದೇವರು ಮತ್ತು ಕ್ಷೇತ್ರದ ಜನರು ಎಲ್ಲವನ್ನೂ ನೋಡುತ್ತಿದ್ದಾರೆ. ಅವರೆಂದೂ ನನ್ನ ಕೈಬಿಡುವುದಿಲ್ಲ ಎನ್ನುವ ವಿಶ್ವಾಸವಿದೆ ಎಂದು ಲಕ್ಷ್ಮೀ ಹೆಬ್ಬಾಳಕರ್ ಈ ಸಂದರ್ಭದಲ್ಲಿ ಹೇಳಿದರು.

ಈ ಸಮಯದಲ್ಲಿ ಗ್ರಾಮದ ಹಿರಿಯರು, ಜ್ಯೋತಿ ಪಾಟೀಲ, ಯುವರಾಜ ಕದಂ, ಲತಾ ಪಾಟೀಲ, ಕೆಂಪಣ್ಣ ಸನದಿ, ಮೋಹನ ಕಾಂಬಳೆ, ಆನಂದ ಭಜಂತ್ರಿ, ಮೀನಾಕ್ಷಿ ಮುತಗೇಕರ್, ಪೂನಂ ಬೆನ್ನಾಳಕರ್, ರಾಹುಲ್ ಪಾಟೀಲ, ವಿಶಾಲ ಬೋಸ್ಲೆ, ಮೋಹನ ಪಾಟೀಲ, ನಿಲೇಶ್ ಕಿಲ್ಲೇಕರ್, ಪಿಂಟು ರಾಜಗೋಳ್ಕರ್ ಮುಂತಾದವರು ಉಪಸ್ಥಿತರಿದ್ದರು.

ಕ್ಯಾನ್ಸರ್ ಪೀಡಿತ ಪುಟ್ಟ ಬಾಲಕನ ಆಸೆ ಈಡೇರಿಸಿದ ನಟ ರಾಮ್ ಚರಣ್

ಹೈದರಾಬಾದ್: ಖ್ಯಾತ ತೆಲುಗು ನಟ ರಾಮ್ ಚರಣ್ ಕ್ಯಾನ್ಸರ್ ಪೀಡಿತ 9 ವರ್ಷದ ಬಾಲಕ ಆಸೆಯನ್ನು ಈಡೇರಿಸಿದ್ದಾರೆ. ಕ್ಯಾನ್ಸರ್ ನಿಂದ ಬಳಲುತ್ತಿರುವ ಬಾಲಕ ಮಣಿ ಕುಶಾಲ್ ಗೆ ಹೈದರಾಬಾದ್ ನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಆತ ರಾಮ್ ಚರಣ್ ಅವರ ದೊಡ್ಡ ಅಭಿಮಾನಿಯಾಗಿದ್ದು, ತನ್ನ ನೆಚ್ಚಿನ ನಟನನ್ನು ಭೇಟಿಯಾಗುವ ಆಸೆ ಇತ್ತು. ಮೆಗಾ ಪವರ್ ಸ್ಟಾರ್ ರಾಮ್ ಚರಣ್ ಆಸ್ಪತ್ರೆಗೆ ಭೇಟಿ ನೀಡಿ ಪುಟ್ಟ ಅಭಿಯಾನಿಯ ಆರೋಗ್ಯ ವಿಚಾರಿಸಿದ್ದಾರೆ. ರಾಮ್ ಚರಣ್ ಅವರ ಹೃದಯ ವೈಶಾಲ್ಯತೆಗೆ ಅಭಿಮಾನಿಗಳು ಟ್ವೀಟರ್ ನಲ್ಲಿ ಭಾರೀ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಚಲಿಸುತ್ತಿದ್ದ ಕಾರಿನಲ್ಲಿ ಬೆಂಕಿ; ಇಬ್ಬರು ಪಾರು

ಕೊಪ್ಪಳ: ನಗರದ ಗಂಜ್ ಸರ್ಕಲ್ ಬಳಿ ಶುಕ್ರವಾರ ಚಲಿಸುತ್ತಿದ್ದ ಕಾರಿನಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ಅದೃಷ್ಟವಷಾತ್ ಇಬ್ಬರು ಪ್ರಾಣಪಾಯದಿಂದ ಪಾರಾಗಿದ್ದಾರೆ.

ಹೊಸಪೇಟೆಯಿಂದ ಕಿನ್ನಾಳ ಗ್ರಾಮದಲ್ಲಿ ಮದುವೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಹೊರಟಿದ್ದ ಕಾರು ಗಂಜ್ ಸರ್ಕಲ್ ಬಳಿ ಬರುತ್ತಿದ್ದಂತೆ ಏಕಾಏಕಿ ಬೆಂಕಿ ಕಾಣಿಸಿಕೊಂಡಿದ್ದು, ತತ್ ಕ್ಷಣವೇ ಕಾರನ್ನು ನಿಲ್ಲಿಸಿ ಹೊರಬಂದ ಇಬ್ಬರು ಪ್ರಾಣಪಯಾದಿಂದ ಪಾರಾಗಿದ್ದಾರೆ.

ಅಗ್ನಿ ಶಾಮಕ ಸಿಬಂದಿಗಳು ಸ್ಥಳಕ್ಕಾಗಮಿಸಿ ಬೆಂಕಿ ನಂದಿಸಿದ್ದು, ಕೊಪ್ಪಳ ನಗರ ಸಂಚಾರಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಜಿಲ್ಲಾ ಮಟ್ಟದ ತರಬೇತಿದಾರರ ತರಬೇತಿ ಕಾರ್ಯಗಾರ

ಬೆಳಗಾವಿ: ಬೆಳಗಾವಿ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಕೆ.ಎಚ್.ಪಿ.ಟಿ ಇವರ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾ ಮಟ್ಟದ ತರಬೇತಿದಾರರ ತರಬೇತಿ ಕಾರ್ಯಗಾರವನ್ನು ಹಮ್ಮಿಕೊಳ್ಳಲಾಯಿತು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಭೀಮಪ್ಪಾ ಲಾಳಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿ ಅದರೊಂದಿಗೆ ಗ್ರಾಮ ಪಂಚಾಯತ್ ಆರೋಗ್ಯ ಅಮೃತ ಅಭಿಯಾನ ಯೋಜನೆಯ ಕೈಪಿಡಿಯನ್ನು ಬಿಡುಗಡೆ ಮಾಡಿದರು, ಮತ್ತು ತರಬೇತಿಯನ್ನು ಎಲ್ಲರೂ ಉತ್ತಮವಾಗಿ ಪಡೆದುಕೊಳ್ಳುವಂತೆ ಸೂಚಿಸಿದರು.

ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿಗಳಾದ (ಆಡಳಿತ) ಭೀಮಪ್ಪಾ ಲಾಳಿ ಅವರು ಪ್ರಸ್ತಾವಿಕ

ಭಾಷಣದಲ್ಲಿ ಗ್ರಾಮ ಪಂಚಾಯತ್ ಆರೋಗ್ಯ ಅಮೃತ ಅಭಿಯಾನ ಯೋಜನೆ ಕುರಿತು ಮಾತನಾಡಿದರು.

ಕಾರ್ಯಾಗಾರದಲ್ಲಿ ಬೆಳಗಾವಿ ಜಿಲ್ಲೆಯ 14 ತಾಲೂಕಿನ ತಾಲೂಕ ಪಂಚಾಯತ ಎ.ಡಿ.ಪಿ.ಆರ್, ತಾಲೂಕ ಆಸ್ಪತ್ರೆಯ ಬಿ.ಹೆಚ್.ಇ.ಓ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸೂಪರ್ ವೈಸರ್, ಗ್ರಾಮ ಪಂಚಾಯತಿ ಆರೋಗ್ಯ ಅಮೃತ ಅಭಿಯಾನದ ವಲಯ ಮುಖ್ಯಸ್ಥರಾದ ಭಾರತಿ, ಬಿಜಾಪುರ ಜಿಲ್ಲಾ ಸಂಯೋಜಕರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ. ಮಹೇಶ ಕೋಣಿ, ಜಿಲ್ಲೆಯ ಎಲ್ಲ ತಾಲೂಕ ಸಂಯೋಜಕರು ಉಪಸ್ಥಿತರಿದ್ದರು.

ಲೋಕಾಯುಕ್ತ ಬಲೆಗೆ ಬಿದ್ದ ಪಿಡಿಓ, ಕಂಪ್ಯೂಟರ್ ಆಪರೇಟರ್

ಚಿತ್ರದುರ್ಗ: 4 ಸಾವಿರ ರೂಪಾಯಿಗೆ ಲಂಚಕ್ಕೆ ಕೈಯೊಡ್ಡಿದ್ದ ಗ್ರಾಮ ಪಂಚಾಯತ್ ಪಿಡಿಓ ಹಾಗೂ ಕಂಪ್ಯೂಟರ್ ಆಪರೇಟರ್ ಲೋಕಾಯುಕ್ತ ಬಲೆಗೆ ಬಿದ್ದ ಘಟನೆ ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ ತಾಲೂಕಿನ ಜಾನಕಲ್ ನಲ್ಲಿ ನಡೆದಿದೆ.

ಪಿಡಿಓ ಶ್ರೀನಿವಾಸ್ ಹಾಗೂ ಕಂಪ್ಯೂಟರ್ ಆಪರೇಟರ್ ಚನ್ನಬಸಪ್ಪ ಲೋಕಾಯುಕ್ತ ಬಲೆಗೆ ಬಿದ್ದವರು.

ಶಾಲಾ ಕಾಂಪೌಂಡ್ ಕಾಮಗಾರಿಗಾಗಿ 4 ಸಾವಿರ ರೂಪಾಯಿ ಲಂಚ ನೀಡುವಂತೆ ಭೀಮಪ್ಪ ಎಂಬುವವರಿಗೆ ಬೇಡಿಕೆ ಇಟ್ಟಿದ್ದರು.

ಈ ಬಗ್ಗೆ ಲೋಕಾಯುಕ್ತಕ್ಕೆ ದೂರು ನೀಡಲಾಗಿತ್ತು. ಭೀಮಪ್ಪ ಅವರಿಂದ 4 ಸಾವಿರ ರೂಪಾಯಿ ಲಂಚ ಪಡೆಯುತ್ತಿದ್ದಾಗ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದು, ಪಿಡಿಓ ಹಾಗೂ ಕಂಪ್ಯೂಟರ್ ಆಪರೇಟರ್ ಇಬ್ಬರೂ ರೆಡ್ ಹ್ಯಾಂಡ್ ಆಗಿ ಬಲೆಗೆ ಬಿದ್ದಿದ್ದಾರೆ.

ಬೇಡಿಕೆ